ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 275 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 23–05–2024 ಗುರುವಾರ ಪುಟ: 4 ಬೆಲೆ : ರೂ.2–00
Volume - 01 Issue - 275 Title- Code: KARKAN 28269 Chitradurga Date: 23-05-2024 Thursday Page: 4 Price: Rs. 2-00

ಒಳಪುಟದ ಸುದ್ದಿಗಳು
ಬಾಲ್ಯ ವಿವಾಹ ತಡೆಗಟ್ಟಿ ಮಕ್ಕಳ ಬಾಳ ಬೆಳಗಿಸಿ: ಆರೋಗ್ಯಧಿಕಾರಿ ರಾಘವೇಂದ್ರ 2
ಬಿಜೆಪಿ ಅಭ್ಯರ್ಥಿಗೆ ಪ್ರಾಶಸ್ತ್ಯದ ಮತ ನೀಡಿ: ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಕರೆ 3
ಅಂಬೇಡ್ಕರ್ ಮತ್ತು ಬಸವಣ್ಣನ ಕೊಡುಗೆ ಗಳಲ್ಲಿನ ಸಾಮ್ಯತೆಗಳು 4
ಸುದ್ದಿ, ಜಾಹಿರಾತಿಗೆ 9686622252

ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

ಫಾಸ್ಟ್ ನ್ಯೂಸ್

ಯುವಕ ಹಾಗೂ ಯುವತಿಯರಿಗೆ ವಿವಿಧ ಕೌಶಲ್ಯಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ದಾವಣಗೆರೆ: ಪ್ರಸಕ್ತ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಪ್ರಾದೇಶಿಕ ತರಬೇತಿ ಕೇಂದ್ರಗಳ ಸಹಯೋಗದಿಂದ 60 ದಿನಗಳ ಕಾಲ ಪರಿಶಿಷ್ಟ ಪಂಗಡಗಳ ಅಲೆಮಾರಿ ಸಮುದಾಯದವರಿಗೆ ಹಾಗೂ ಅರಣ್ಯ ಆಧಾರಿತ ಆದಿವಾಸಿ ಸಮುದಾಯದ ವಿದ್ಯಾವಂತ ಯುವಕ ಹಾಗೂ ಯುವತಿಯರಿಗೆ ಸ್ವಾವಲಂಭಿ ಬದುಕು ಸಾಗಿಸಲು ವಿವಿಧ ಕೌಶಲ್ಯಭಿವೃದ್ಧಿ ತರಬೇತಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಪರಿಶಿಷ್ಟ ಪಂಗಡಗಳ ಅಲೆಮಾರಿ ಸಮುದಾಯ ಹಾಗೂ ಅರಣ್ಯ ಆಧಾರಿತ ಆದಿವಾಸಿ ಸಮುದಾಯದ ವಿದ್ಯಾವಂತ ಯುವಕ ಹಾಗೂ ಯುವತಿಯರು ಜಂಟಿ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ದಾವಣಗೆರೆ, ಜಿಲ್ಲಾಡಳಿತ ಭವನ, ಕರೂರು ಇಂಡಸ್ಟ್ರೀಯಲ್ ಏರಿಯಾ, ದಾವಣಗೆರೆ ಅಥವಾ ಸಂಬಂಧಪಟ್ಟ ತಾಲ್ಲೂಕು ಸಹಾಯಕ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಅರ್ಜಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ನಾಗರಾಜ ತಿಳಿಸಿದ್ದಾರೆ.

ಶಿಮುಲ್‌ನಿಂದ ಹೈನುಗಾರಿಕೆ ಉತ್ತೇಜಿಸಲು ಬೀಜದ ಕಿಟ್ ವಿತರಣೆ

ದಾವಣಗೆರೆ: ಹೈನು ಉತ್ಪಾದಕರನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಕೇಂದ್ರ ಸರ್ಕಾರದ ಎನ್.ಎಲ್.ಎಂ ಯೋಜನೆಯ ಅನುದಾನದಡಿ ಕರ್ನಾಟಕ ಸಹಕಾರ ಹಾಲು ಮಹಾಮಂಡಳ ವತಿಯಿಂದ ಶಿಮುಲ್‌ಗೆ ರೂ. 1.20 ಕೋಟಿ ಮೊತ್ತದ ಹಸಿರು ಮೇವಿನ ಬಿತ್ತನೆ ಬೀಜಗಳ ಮಿನಿ ಕಿಟ್‌ಗಳನ್ನು ಉಚಿತವಾಗಿ ಹಂಚಿಕೆ ಮಾಡಲಾಗಿದೆ. ಕಳೆದ ಸಾಲಿನಲ್ಲಿ ತೀವ್ರ ಬರ ಪರಿಸ್ಥಿತಿ ಇದ್ದ ಹಿನ್ನೆಲೆಯಲ್ಲಿ ಮೇವಿನ ಲಭ್ಯತೆ ಕಡಿಮೆಯಾದ್ದರಿಂದ ದುಬಾರಿ ಬೆಲೆ ತೆತ್ತು ಮೇವನ್ನು ಖರೀದಿಸಿ ನಷ್ಟ ಅನುಭವಿಸಿದ ರೈತರಿಗೆ ನೆರವಾಗುವ ಉದ್ದೇಶದಿಂದ ಮುಂಗಾರು ಹಂಗಾಮು ಪ್ರಾರಂಭವಾಗುವ ಮುನ್ನ ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ ವತಿಯಿಂದ ವಿವಿಧ ಮೇವಿನ ತಳಿಗಳ 3.5 ಕೆ.ಜಿ ಕಿರು ಪೊಟ್ಟಣಗಳನ್ನು (ಮಿನಿ ಕಿಟ್) ರೈತರಿಗೆ ಉಚಿತವಾಗಿ ಪೂರೈಸಲು ನಿರ್ಧರಿಸಿದೆ. ಪ್ರತಿಯೊಬ್ಬ ಹಾಲು ಉತ್ಪಾದಕರಿಗೂ ಮೇವಿನ ಬೀಜದ ಕಿರು ಪೊಟ್ಟಣಗಳನ್ನು ವಿತರಿಸಿ ಹೆಚ್ಚು ಹಸಿರು ಮೇವು ಉತ್ಪಾದಿಸುವ ಮೂಲಕ ಉತ್ಪಾದನಾ ವೆಚ್ಚವನ್ನು ತಗ್ಗಿಸಿ ಹೈನುಗಾರಿಕೆಯನ್ನು ಲಾಭದಾಯಕ ಉದ್ಯಮವಾಗಿ ಮಾರ್ಪಡಿಸಲು ಯೋಜಿಸಲಾಗಿದೆ. ಹಾಲು ಉತ್ಪಾದಕರ ಸಹಕಾರ ಸಂಘಗಳ ಹಾಲು ಶೇಖರಣೆ ಆಧಾರದ ಮೇಲೆ ಮಳೆ ಆಶ್ರಿತ ರೈತರು, ನೀರಾವರಿ ಹೊಂದಿರುವ ರೈತರನ್ನು ಗುರುತಿಸಿ ಮೇವಿನ ಬೀಜದ ಮಿನಿ ಕಿಟ್‌ಗಳನ್ನು ಹಂಚಿಕೆ ಮಾಡುವಂತೆ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಈಗಾಗಲೇ ಮಾರ್ಗಸೂಚಿ ಹೊರಡಿಸಲಾಗಿದೆಂದು ಶಿಮುಲ್ ವ್ಯವಸ್ಥಾಪಕರು ನಿರ್ದೇಶಕರು ತಿಳಿಸಿದ್ದಾರೆ.

ಭಕ್ತರ ಮೇಲೆ ಹಾರಿದ ದನ: 6 ಜನರಿಗೆ ಗಾಯ

ಚಳ್ಳಕೆರೆ: ನಗರದಲ್ಲಿ ಬುಧವಾರ ನಡೆದ ಶ್ರೀವೀರಭದ್ರಸ್ವಾಮಿ ರಥೋತ್ಸವದಲ್ಲಿ ಬೀಡಾಡಿದನವೊಂದು ಭಕ್ತರ ಮೇಲೆ ಎಗರಿದ ಈ ಪರಿಣಾಮ ದೊಡ್ಡೇರಿಯ ಮಹದೇವಪ್ಪ(60), ರಾಮಜೋಗಿಹಳ್ಳಿ ವಿದ್ಯಾ (20), ಅಂಬೇಡ್ಕರ್ ನಗರದ ಪ್ರಣತಿ(10), ಜನತಾಕಾಲೋನಿಯ ಸಿದ್ದೇಶ(19) ಹಾಗೂ ಇಬ್ಬರು ಯುವಕರು ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಗೆ ಆಗಮಿಸಿ ಚಿಕಿತ್ಸೆ ಪಡೆದು ತೆರಳಿದ್ದಾರೆ.

ಮುಂಗಾರು ಹಂಗಾಮಿನ ಪೂರ್ವಸಿದ್ಧತಾ ಕಾರ್ಯಾಗಾರದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

ಬಿತ್ತನೆ ಬೀಜ, ಗೊಬ್ಬರ ಪೂರೈಕೆಗೆ ಕ್ರಮವಹಿಸಿ

» ಚಿತ್ರದುರ್ಗ

ಮುಂಗಾರು ಹಂಗಾಮಿಗೆ ಅಗತ್ಯವಿರುವ ಬಿತ್ತನೆ ಬೀಜ, ರಸಗೊಬ್ಬರ ಸಮರ್ಪಕ ಪೂರೈಕೆ ಮಾಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ಪೂರ್ವಸಿದ್ಧತಾ ಕಾರ್ಯಾಗಾರ ಹಾಗೂ ಕೃಷಿ ಪರಿಕರಗಳ ಮಾರಾಟಗಾರರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಿತ್ರದುರ್ಗ ಕೃಷಿಯಾಧಾರಿತ ಜಿಲ್ಲೆಯಾಗಿದ್ದು, ಈ ಬಾರಿ ಪೂರ್ವ ಮುಂಗಾರಿನಲ್ಲಿ ಉತ್ತಮ ಮಳೆಯಾಗಿದೆ. ಮುಂಗಾರು ಹಂಗಾಮಿಗೆ ಅಗತ್ಯ ಸಿದ್ಧತೆ ಕೈಗೊಳ್ಳಬೇಕಾಗಿದೆ. ಜಿಲ್ಲೆಯಲ್ಲಿ 3 ಲಕ್ಷಕ್ಕೂ ಹೆಚ್ಚು ಹೆಕ್ಟೇರ್‌ನಲ್ಲಿ ಮುಂಗಾರು ಹಂಗಾಮಿಗೆ ಬಿತ್ತನೆ ಗುರಿ ಹೊಂದಲಾಗಿದೆ. ಹಾಗಾಗಿ ಮುಖ್ಯವಾಗಿ ಬಿತ್ತನೆ ಬೀಜ, ರಸಗೊಬ್ಬರ ಸಮರ್ಪಕ ವಿತರಣೆ, ಕೃಷಿ ಚಟುವಟಿಕೆಯಲ್ಲಿ ಹೊಸ ತಾಂತ್ರಿಕತೆ ಅಳವಡಿಕೆ, ಹೊಸ ತಳಿ ಹಾಗೂ ಹೆಚ್ಚಿನ ಇಳುವರಿಯ ಬಿತ್ತನೆ ಬೀಜಗಳ ಪರಿಚಯವನ್ನು ನಿಗಧಿತ ಸಮಯದಲ್ಲಿ, ನಿರ್ಧಿಷ್ಟ ಅವಧಿಯಲ್ಲಿ ರೈತರಿಗೆ ಅಗತ್ಯ ಮಾಹಿತಿ ತಲುಪಿಸುವ ವ್ಯವಸ್ಥೆ ಮಾಡಬೇಕು. ಈ ನಿಟ್ಟಿನಲ್ಲಿ ಜಿಲ್ಲೆಯ ರೈತರು ಕೃಷಿ ಚಟುವಟಿಕೆ ಕೈಗೊಳ್ಳಲು ಸಮರ್ಪಕವಾಗಿ ಬಿತ್ತನೆ ಬೀಜ, ರಸಗೊಬ್ಬರಗಳು ನಿಗಧಿತ ಸಮಯಕ್ಕೆ ದೊರೆಯುವಂತಾಗಬೇಕು ಎಂದರು. ಜಿಲ್ಲೆಯ ಅಗತ್ಯಕ್ಕೆ ತಕ್ಕಂತೆ ಬಿತ್ತನೆ ಬೀಜ, ರಸಗೊಬ್ಬರ ಪ್ರಮಾಣವನ್ನು ದಾಸ್ತಾನು ಮಾಡಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಕಳಪೆ ಬಿತ್ತನೆ ಬೀಜ ಸರಬರಾಜು ಆಗದಂತೆ ಕ್ರಮವಹಿಸುವ ಮೂಲಕ ಅದರ ಗುಣಮಟ್ಟವನ್ನು ಪರಿಶೀಲನೆ ನಡೆಸಿ, ನಿಗಧಿತ ಅವಧಿಯಲ್ಲಿ ಪೂರೈಕೆ ಮಾಡಬೇಕು. ಮುಂಗಾರು ಪೂರ್ವ ಸಿದ್ಧತೆಯ ಈ ಹಂತದಲ್ಲಿ ರೈತರಿಗೆ ಅಗತ್ಯವಾಗಿ ಬೇಕಾಗಿರುವ ಸಲಹೆ ಸೂಚನೆಗಳನ್ನು ನೀಡುವುದು ಕೃಷಿ ಇಲಾಖೆ ಅಧಿಕಾರಿಗಳ ಕರ್ತವ್ಯವೂ ಹೌದು ಎಂದು ತಿಳಿಸಿದರು.

ಜಿಲ್ಲೆಯ ಕೃಷಿ ಪರಿಕರಗಳ ಮಾರಾಟಗಾರರು ಬಿತ್ತನೆ, ರಸಗೊಬ್ಬರವನ್ನು ನಿಗಧಿತ ದರಕ್ಕೆ ಸರಿಯಾಗಿ ಮಾರಾಟ ಮಾಡಬೇಕು. ಯಾವುದೇ ಕಾರಣಕ್ಕೂ ಹೆಚ್ಚಿನ ದರಕ್ಕೆ ಮಾರಾಟ ಮಾಡಬಾರದು ಎಂದು ಸೂಚನೆ ನೀಡಿದ ಅವರು, ರೈತ ಸಂಪರ್ಕ ಕೇಂದ್ರಗಳು ಹಾಗೂ ಇಲಾಖೆ ಅಧಿಕಾರಿಗಳು ಕೃಷಿ ಚಟುವಟಿಕೆಗಳಿಗೆ ಸಂಬಂಧಪಟ್ಟಂತೆ ರೈತರಿಗೆ ಸರಿಯಾದ ಮಾಹಿತಿಯನ್ನು ನೀಡಬೇಕು. ರೈತ ಸಂಪರ್ಕ ಕೇಂದ್ರಗಳು 24*7 ಕಾರ್ಯನಿರ್ವಹಿಸುವ ಮೂಲಕ ರೈತರಿಗೆ ಸಮರ್ಪಕವಾದ ಮಾಹಿತಿ ನೀಡಬೇಕು ಎಂದರು.

ರೈತರ ಸಮಸ್ಯೆಗಳಿಗೆ ಸ್ಪಂದಿಸಿದ ಅಧಿಕಾರಿಗಳ ವಿರುದ್ಧ ನಿರ್ಧಾಕ್ಷಿಣ್ಯ ಕ್ರಮ: ಬೆಳೆವಿಮೆ ಹಾಗೂ ಬೆಳೆ ನಷ್ಟ ಪರಿಹಾರ ಪಾವತಿಗೆ ಸಂಬಂಧಪಟ್ಟಂತೆ ಈಗಾಗಲೇ ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ ಸೇರಿದಂತೆ ಜಿಲ್ಲೆಯ ಆಯಾ ತಾಲ್ಲೂಕು ಕಚೇರಿಗಳಲ್ಲಿಯೂ ಸಹಾಯವಾಣಿ ಕೇಂದ್ರಗಳನ್ನು ಸ್ಥಾಪಿಸಿ, ರೈತರಿಂದ ದೂರುಗಳನ್ನು ಸ್ವೀಕೃತಿ ಮಾಡಲಾಗುತ್ತಿದೆ ಎಂದು ತಿಳಿಸಿದ ಅವರು, ಕೆಲವು ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರ ಸಮಸ್ಯೆಗಳಿಗೆ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂದು ರೈತರು ದೂರು ನೀಡುತ್ತಿದ್ದು, ಬೆಳೆವಿಮೆ ಹಾಗೂ ಬೆಳೆನಷ್ಟ ಪಾವತಿ ಸಂಬಂಧ ಹಾಗೂ ರೈತರ ಸಮಸ್ಯೆಗಳಿಗೆ ಸರಿಯಾದ ಮಾಹಿತಿ ನೀಡದೇ ಇರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ವಿರುದ್ಧ ನಿರ್ಧಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು.

ಪಿಂಚಣಿ, ಬೆಳೆ ಪರಿಹಾರದ ಹಣವನ್ನು ಬ್ಯಾಂಕ್‌ಗಳು ಸಾಲಕ್ಕೆ ಕಡಿತ ಮಾಡಿಕೊಳ್ಳುವಂತಿಲ್ಲ: ಸಾಮಾಜಿಕ ಭದ್ರತಾ ಯೋಜನೆಯ ಪಿಂಚಣಿಯ ಹಣ, ಬೆಳೆವಿಮೆ ಹಾಗೂ ಬೆಳೆನಷ್ಟ ಪರಿಹಾರ ಸೇರಿದಂತೆ ಸರ್ಕಾರದ ವಿವಿಧ ಯೋಜನೆಯ ಮೊತ್ತವನ್ನು ಬ್ಯಾಂಕ್‌ಗಳು ಯಾವುದೇ ಕಾರಣಕ್ಕೂ ಕಡ್ಡಾಯವಾಗಿ ರೈತರ ಇತರೆ ಸಾಲಕ್ಕೆ ಜಮೆ ಮಾಡಿಕೊಳ್ಳಬಾರದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಬ್ಯಾಂಕ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸರ್ಕಾರದ ನಿರ್ದೇಶನ ಹಾಗೂ ಜಿಲ್ಲಾಡಳಿತದಿಂದಲೂ ಈಗಾಗಲೇ ಲೀಡ್ ಬ್ಯಾಂಕ್ ವ್ಯವಸ್ಥಾಪಕರ ಮೂಲಕ ಬ್ಯಾಂಕ್‌ಗಳಿಗೆ ನಿರ್ದೇಶನ ನೀಡಲಾಗಿದ್ದು, ಬೆಳೆಪರಿಹಾರ, ಪಿಂಚಣಿ ಹಣವನ್ನು ರೈತರ ಸಾಲದ ಖಾತೆಗಳಿಗೆ ಯಾವುದೇ ಕಾರಣಕ್ಕೂ ಜಮೆ ಮಾಡಿಕೊಳ್ಳಬಾರದು. ಒಂದು ವೇಳೆ ತಾಂತ್ರಿಕ ಕಾರಣದಿಂದ ಸಾಲದ ಖಾತೆಗೆ ಜಮೆಯಾಗಿದ್ದರೆ, ಕಡ್ಡಾಯವಾಗಿ ಮರು ಪಾವತಿ ಮಾಡಬೇಕು. ಮರು ಪಾವತಿ ಮಾಡದೇ ಇರುವ ಬ್ಯಾಂಕ್‌ಗಳ ವಿರುದ್ಧ ಕಾನೂನು ರೀತ್ಯಾ ಕ್ರಮಕೈಗೊಳ್ಳಲಾಗುವುದು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಕಳೆದ ಬಾರಿ ಕೈಗೊಂಡಿರುವ ಬೆಳೆ ಸಮೀಕ್ಷೆ ಪ್ರಯೋಗಗಳ ವ್ಯಾತ್ಯಾಸದಿಂದಾಗಿ ಸುಮಾರು ರೈತರಿಗೆ ಬೆಳೆವಿಮೆ ಪಾವತಿಯಾಗಿಲ್ಲ. ಹಾಗಾಗಿ ಮರು ಬೆಳೆ ಸಮೀಕ್ಷೆ ಪ್ರಯೋಗ ನಡೆಸಿ ಬೆಳೆವಿಮೆ ಪಾವತಿ ಮಾಡುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಆದರೆ ಪ್ರಸಕ್ತ ಸಾಲಿನ ಬೆಳೆ ಸಮೀಕ್ಷೆ ಪ್ರಯೋಗಗಳ ಸಂದರ್ಭದಲ್ಲಿ ಇಂತಹ ವ್ಯತ್ಯಾಸಗಳು ಆಗಬಾರದು. ಮುಂದಿನ ದಿನಗಳಲ್ಲಿ ಬೆಳೆ ಸಮೀಕ್ಷೆ ಪ್ರಯೋಗ ಕೈಗೊಳ್ಳುವ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಕಾರ್ಯಾಗಾರ ಹಮ್ಮಿಕೊಂಡು, ಬೆಳೆ ಸಮೀಕ್ಷೆ ಪ್ರಯೋಗಗಳ ಕುರಿತು ಮಾಹಿತಿ ನೀಡಲಾಗುವುದು. ಬೆಳೆ ಸಮೀಕ್ಷೆ ಪ್ರಯೋಗಗಳನ್ನು ಕ್ರಮಬದ್ಧವಾಗಿ, ನಿಯಮಬದ್ಧವಾಗಿ ಮಾಡಬೇಕು ಎಂದರು.

ಪುಟ 2

ಶ್ರೀವೀರಭದ್ರಸ್ವಾಮಿ ರಥೋತ್ಸವ: ರಸ್ತೆ ಇಕ್ಕಲಗಳಲ್ಲೂ ಭಕ್ತ ಸಾಗರ

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ನಗರದ ಗ್ರಾಮ ದೇವರಾದ ಶ್ರೀವೀರಭದ್ರಸ್ವಾಮಿ ದೇವರ ರಥೋತ್ಸವ ಬುಧವಾರ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆಯಿತು.

ಪ್ರತಿವರ್ಷದಂತೆ ಈ ವರ್ಷವೂ ಮೇ.22ರ ಬುಧವಾರ ಬೆಳಗಿನ ಜಾವ ಶ್ರೀಸ್ವಾಮಿಯ ದೇವಸ್ಥಾನದ ಮುಂದೆ ಅಗ್ನಿಕುಂಡ ಕಾರ್ಯಕ್ರಮ ನಡೆಯಿತು. ಬೆಳಗಿನ ನಸುಕಿನಲ್ಲೂ ಸಹ ಈ ಭಾರಿ ಅತಿಹೆಚ್ಚಿನ ಭಕ್ತರು ಅಗ್ನಿಕುಂಡ ಕಾರ್ಯಕ್ರಮವನ್ನು ವೀಕ್ಷಿಸಿದರು. ದೇವಸ್ಥಾನದ ಸುತ್ತಮುತ್ತಲಿನ ಗಲ್ಲಿಗಲ್ಲಿಗಳಲ್ಲಿ ಬೆಳಗಿನ ಜಾವ 3ರ ಸಮಯಕ್ಕೆ ಭಕ್ತರು ಜಮಾಯಿಸಿದ್ದರು. ಪೂಜಾ ಕಾರ್ಯಗಳು, ಪುರಂತರ ವೀರನಾಟ್ಯದ ನಂತರ ಸುಮಾರು 4.30ಕ್ಕೆ ಅಗ್ನಿಕುಂಡ ಕಾರ್ಯಕ್ರಮ ಆರಂಭವಾಯಿತು.

ಹೊಸದುರ್ಗ ಸ.ಪ.ಪೂ.ಕಾಲೇಜಿನ ಪ್ರೌಢಶಾಲೆ 2 ಕೋಟಿ ವಿದ್ಯಾರ್ಥಿ ವೇತನದತ್ತ ದಾಪುಗಾಲು

» ಹೊಸದುರ್ಗ

8ನೇ ತರಗತಿಗೆ (ಸರ್ಕಾರಿ, ಅನುದಾನಿತ ಶಾಲೆಗಳಿಗೆ ಮಾತ್ರ) ಕೇಂದ್ರ ಸರ್ಕಾರ ನಡೆಸುವ ರಾಷ್ಟ್ರೀಯ ಪ್ರತಿಭಾನ್ವೇಷಣೆ ಪರೀಕ್ಷೆಯಲ್ಲಿ ರಾಜ್ಯದಲ್ಲಿಯೇ 47 ಕ್ಕೂ ಅತಿ ಹೆಚ್ಚು ವಿದ್ಯಾರ್ಥಿಗಳು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗಯೊಂದರಲ್ಲಿ ಆಯ್ಕೆಯಾಗುವ ಮೂಲಕ ಹೊಸದುರ್ಗಕ್ಕೆ ಕೀರ್ತಿಯನ್ನು ತಂದಿರುತ್ತಾರೆ. ಕಳೆದ ವರ್ಷ ಈ ಶಾಲೆಯಲ್ಲಿ 40 ವಿದ್ಯಾರ್ಥಿಗಳು ಆಯ್ಕೆಯಾಗಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ. ಈ ಪರೀಕ್ಷೆಯಲ್ಲಿ ಆಯ್ಕೆಯಾದವರಿಗೆ ವರ್ಷಕ್ಕೆ 12,000 ರೂ.ನಂತೆ 4 ವರ್ಷಗಳ ಕಾಲ 48,000ರೂ ವಿದ್ಯಾರ್ಥಿ ವೇತನ ಸಿಗುತ್ತದೆ.

ಪುಟ 2

ಪ್ರಮುಖ ಸುದ್ದಿ

ಬೆಳೆ ವಿಮೆ ತಾರತಮ್ಯ ಸರಿಪಡಿಸಲು ರೈತ ಸಂಘ ಆಗ್ರಹ

» ಚಿತ್ರದುರ್ಗ

ಬರ ಪರಿಹಾರ ಮತ್ತು ಬೆಳೆ ವಿಮೆ ತಾರತಮ್ಯ ಸರಿಪಡಿಸಿ ರೈತರ ಖಾತೆಗೆ ಹಣ ಜಮೆ ಮಾಡಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಾಸುದೇವ ಮೇಟಿ ಬಣದ ಚಿತ್ರದುರ್ಗ ಜಿಲ್ಲಾ ಸಮಿತಿ ಬುಧವಾರ ಪ್ರತಿಭಟನೆ ನಡೆಸಿತು.

ಜಿಲ್ಲಾಡಳಿತ ತಾಲ್ಲೂಕು ಮತ್ತು ಹೋಬಳಿ ಮಟ್ಟದಲ್ಲಿ ಬರ ಪರಿಹಾರದ ಸಹಾಯವಾಣಿ ಕೇಂದ್ರವನ್ನು ಸ್ಥಾಪನೆ ಮಾಡಿದ್ದು, ಸಹಾಯವಾಣಿ ತಾಲ್ಲೂಕಿನ ಅಧಿಕಾರಿಗಳನ್ನು ಕೇಳಿದರೆ ನಿಮ್ಮ ದಾಖಲೆಗಳನ್ನು ಕೊಡಿ. ಚೆಕ್ ಮಾಡಿ ಹೇಳುತ್ತೇವೆಂದು ಎಫ್.ಐ.ಡಿ ಕಾರ್ಡ್ ಚೆಕ್ ಮಾಡಿ ನಿಮ್ಮದು ಜಮೀನು ನೀರಾವರಿ ಹೀಗಾಗೀ ನಿಮಗೆ ಪರಿಹಾರ ಹಣ ಬರುವುದಿಲ್ಲ, ಖುಷಿ ಜಮೀನಿಗೆ ಮಾತ್ರ ಬರುತ್ತದೆ ಎಂದು ಅಧಿಕಾರಿಗಳು ತಿಳಿಸಿರುತ್ತಾರೆ. ಖುಷಿ ಜಮೀನು ಇರುವ ಎಫ್.ಐ.ಡಿಕಾರ್ಡ್‌ಕೊಟ್ಟರೆನಿಮ್ಮನೀರಾವರಿ ಜಮೀನನೆಂದು ನಮೂದಾಗಿದೆಂದು 'ಹೇಳಿ ಕಳುಹಿಸಿರುತ್ತಾರೆ. ರೈತರು ನಮ್ಮ ಜಮೀನಿನಲ್ಲಿ ಬೋರ್‌ವೆಲ್ ಇಲ್ಲ, ಕರೆಂಟ್ ಕಂಬಗಳು ಇಲ್ಲ, ಕರೆಂಟ್ ಇಲ್ಲ, ನೀವೆ ಬಂದು ನೋಡಿ ಸ್ವಾಮಿ ಎಂದು ಹೇಳಿದರೆ ಅಧಿಕಾರಿಗಳುಸರ್ಕಾರಕ್ಕೆಹೋಗಿಕೇಳಿನಾವು ಏನು ಮಾಡಲು ಬರುವುದಿಲ್ಲ. ಇಂತಹ ಉಡಾಫೆ ಉತ್ತರಗಳನ್ನು ನೀಡುತ್ತಿದ್ದಾರೆ ಎಂದು ಆರೋಪಿಸಲಾಯಿತು.ಸರ್ಕಾರವು ಚಿತ್ರದುರ್ಗ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ್ದು, ಬರ ಪರಿಹಾರ ಹಣವನ್ನು ತಾರತಮ್ಯ ಮಾಡಿ ಒಂದು ಹಳ್ಳಿಗೆ ಸುಮಾರು 10–15 ಜನ ರೈತರಿಗೆ ಮಾತ್ರ ನೀಡಿ, ಒಬ್ಬರಿಗೆ 4 ಸಾವಿರ, ಇನ್ನೊಬ್ಬರಿಗೆ 5 ಸಾವಿರ. ಮತ್ತೊಬ್ಬರಿಗೆ 14 ಸಾವಿರ, ನೀರಾವರಿ ರೈತರಿಗೆ 15 ಸಾವಿರ ಗಳಂತೆ ಜಮೆ ಮಾಡಿದ್ದಾರೆ. ಮತ್ತೊಬ್ಬರಿಗೆ ರೈತರಿಗೆ 2 ಸಾವಿರ ಮೆಸೇಜ್ ಬಂದಿದೆ. ಆದರೆ ಬ್ಯಾಂಕ್ ಖಾತೆಗೆ ಹಣ ಜಮಾ ಆಗಿಲ್ಲ. ಇದು ಅಧಿಕಾರಿಗಳ ಬೇಜವಾಬ್ದಾರಿತನವು? ಸರ್ಕಾರದ್ದು? ಬೆಳೆ ವಿಮೆ ಕಟ್ಟಿದಂತಹ ಕೆಲವು ರೈತರಿಗೆ ಪಾರ್ಸಟೆಜ್ ನಿಗಧಿ ಮಾಡಿ ಹಣವನ

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5830
85 ಕೆಡಿಎಂ (ಗ್ರಾಂ)	5330

ಬೆಳ್ಳಿ ಬೆಲೆ	
ಕೆಜಿ	67500

ಫಾಸ್ಟ್ ನ್ಯೂಸ್

ಭದ್ರಾ ಜಲಾಶಯದಿಂದ ತುಂಗಭದ್ರಾ ನದಿಗೆ ನೀರು

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಭದ್ರಾ ಜಲಾಶಯದಿಂದ ತುಂಗಾಭದ್ರಾ ನದಿಗೆ ಗದಗ, ಹಾವೇರಿ ಜಿಲ್ಲಾ ವ್ಯಾಪ್ತಿಗೆ ಬರುವ ಗ್ರಾಮಗಳ ಕುಡಿಯುವ ನೀರಿನ ಉದ್ದೇಶಕ್ಕಾಗಿ ಭದ್ರಾ ನದಿಯ ಮೂಲಕ ಮೇ.22ರ ರಾತ್ರಿ 10 ಗಂಟೆಯಿಂದ ಮೇ 28ರವರೆಗೆ ನೀರನ್ನು ಹರಿಸಲಾಗುವುದು. ನದಿ ಪಾತ್ರದಲ್ಲಿ ಸಾರ್ವಜನಿಕರು ತಿರುಗಾಡುವುದಾಗಲಿ, ದನಕರುಗಳನ್ನು ನದಿಗೆ ಇಳಿಸುವುದಾಗಲಿ, ಇತರೆ ಚಟುವಟಿಕೆಗಾಗಿ ನದಿಗೆ ಇಳಿಯದಂತೆ ಎಚ್ಚರಿಕೆ ನೀಡಲಾಗಿದೆ. ಈ ಅವಧಿಯಲ್ಲಿ ರೈತರು ನದಿ ದಂಡೆಯಲ್ಲಿ ಅನಧಿಕೃತವಾಗಿ ಅಳವಡಿಸಿರುವ ಪಂಪ್‌ಸೆಟ್‌ಗಳಿಂದ ನೀರೆತ್ತುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಕ.ನೀ.ನಿ.ನಿ ಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ.

ತುಂಗಭದ್ರಾ ನದಿಯಲ್ಲಿ ಮಳೆ ನೀರು, ಕುದಿಸಿ ಆರಿಸಿ ಕುಡಿಯಲು ಸಲಹೆ

» ದಾವಣಗೆರೆ

ಹರಿಹರ ನಗರದ ಕವಲೆತ್ತು ಗ್ರಾಮದ ಹತ್ತಿರ ತುಂಗಭದ್ರ ನದಿಯ ಕುಡಿಯುವ ನೀರು ಸರಬರಾಜು ಯೋಜನೆಯಡಿ ನೀರು ಪೂರೈಸಲಾಗುತ್ತಿರುವುದರಿಂದ ಜಾಕ್‌ವೆಲ್‌ಗೆ ಮಳೆಯ ನೀರು 24/7 ನಿರಂತರ ಹರಿಯುತ್ತಿದ್ದು. ಸಾರ್ವಜನಿಕರು ಕಡ್ಡಾಯವಾಗಿ ಕುದಿಸಿ–ಆರಿಸಿದ ನೀರನ್ನು ಕುಡಿಯಬೇಕು ಹಾಗೂ ನೀರನ್ನು ವ್ಯರ್ಥ ಮಾಡದೇ ಮಿತವಾಗಿ ಬಳಸಲುಬೇಕೆಂದು ಹರಿಹರ ನಗರ ಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

ಐಟಿಐ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ದಾವಣಗೆರೆ ಇಲ್ಲಿ ಐಟಿಐ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಈ ಸಂಸ್ಥೆ ಎನ್‌ಸಿವಿಟಿ ಯಿಂದ ಸಂಯೋಜನೆ ಪಡೆದ ಎಲೆಕ್ಟ್ರೀಷಿಯನ್, ಫಿಟ್ಟರ್, ಎಂ.ಆರ್&ಎಸ್ಸಿ, ಎಂ.ಇ.ವಿ ಮತ್ತು ಅಡ್ವಾನ್ಸ್ ಸಿ.ಎನ್.ಸಿ ವೃತ್ತಿಗಳಿದ್ದು, ಈ ವೃತಿಗಳಿಗೆ ಸರ್ಕಾರಿ ಐ.ಟಿ.ಐ, ದಾವಣಗೆರೆ ಅಥವಾ ಹತ್ತಿರದ ಸೈಬರ್ ಸೆಂಟರ್ ನಲ್ಲಿ ಛಿಣಜ ಇಚಿಡಿಟಿಚಿಣಚಿಇಚಿ. ರಠತ.ಎಟಿ ವೆಬ್ ಸೈಟ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂನ್ 3 ಕೊನೆಯ ದಿನವಾಗಿರುತ್ತದೆ ಎಂದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರರು ತಿಳಿಸಿದ್ದಾರೆ.

ಮಾಜಿ ಸೈನಿಕರು ವಾಸಸ್ಥಳ ಬದಲಾವಣೆ ವಿಳಾಸ ನೀಡಲು ಕೋರಿಕೆ

» ದಾವಣಗೆರೆ

ಮಾಜಿ ಸೈನಿಕರು ಹಾಗೂ ಮಾಜಿ ಸೈನಿಕರ ಅವಲಂಭಿತರು ತಮ್ಮ ಮನೆಯ ವಿಳಾಸ ಬದಲಾವಣೆಯಾಗಿದ್ದಲ್ಲಿ ವಿವರವನ್ನು ಸೈನಿಕ ಕಲ್ಯಾಣ ಮತ್ತು ಮನರ್ವಸತಿ ಇಲಾಖೆ, ಶಿವಮೊಗ್ಗ ಕಚೇರಿಗೆ ಪ್ರಸ್ತುತ ವಾಸವಿರುವ ಸ್ಥಳದ ಸ್ಥಳೀಯ ಗ್ರಾಮ ಪಂಚಾಯತಿ, ನಗರಸಭೆ ಅಥವಾ ಯಾವುದೇ ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿದ ನಿವಾಸಿ ಪ್ರಮಾಣ ಪತ್ರದ ಮೂಲ ಪ್ರತಿ ಹಾಗೂ ಮಾಜಿ ಸೈನಿಕರ ಮೂಲ ದಾಖಲೆಗಳೊಂದಿಗೆ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ದೂ. 08182–220925 ಸಂಖ್ಯೆಗೆ ಕರೆ ಮಾಡಲು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕ ಡಾ.ಸಿ.ಎ ಹಿರೇಮಠ ತಿಳಿಸಿದ್ದಾರೆ.

ಹೊಸದುರ್ಗ ಸ.ಪ.ಪೂ. ಕಾಲೇಜಿನ ಪ್ರೌಢಶಾಲೆ 2 ಕೋಟಿ ವಿದ್ಯಾರ್ಥಿ ವೇತನದತ್ತ ದಾಪುಗಾಲು

» ಮೊದಲ ಪುಟದಿಂದ

ಈ ಸಾಧನೆ ಹಿಂದೆ ಶಿಕ್ಷಕ ಆರ್.ಶಿವಶಂಕರ್ ಪ್ರಯತ್ನ ಎದ್ದು ಕಾಣುತ್ತದೆ. ವೃತ್ತಿಯಲ್ಲಿ ಆಂಗ್ಲ ಶಿಕ್ಷಕರಾದರೂ ಗಣಿತದಲ್ಲಿ ಎತ್ತಿದ ಕೈ. 2013–14 ರಿಂದ ಪ್ರಾರಂಭವಾದ ಇವರ ತರಬೇತಿ ಇಲ್ಲಿಯವರೆಗೆ ಸುಮಾರು 2.ಕೋಟಿ ವಿದ್ಯಾರ್ಥಿ ವೇತನ ಮಕ್ಕಳಿಗೆ ಸಿಗುವಂತೆ ಮಾಡಿದ್ದಾರೆ. ಯಾವುದೇ ಫಲಾಪೇಕ್ಷೆ ನಿರೀಕ್ಷಿಸದೆ ಮಾಡಿದ ಉಚಿತ ತರಬೇತಿಗೆ 400ಕ್ಕೂ ಹೆಚ್ಚು ಕುಟುಂಬಗಳಿಗೆ ಆರ್ಥಿಕವಾಗಿ ಅನುಕೂಲವಾಗಿದೆ. ಕಳೆದ 11 ವರ್ಷಗಳಿಂದಲೂ ಈ ಶಾಲೆಯ ವಿದ್ಯಾರ್ಥಿಗಳೇ ಜಿಲ್ಲಾ ಟಾಪರ್ ಆಗಿರುವುದು ವಿಶೇಷವಾಗಿದೆ. ಪ್ರಸಕ್ತ ವರ್ಷದ ಸಾಲಿನಲ್ಲಿ ಭಾವನ. ಆರ್ 117 ಅಂಕಗಳನ್ನು ಗಳಿಸುವ ಮೂಲಕ ಜಿಲ್ಲಾ ಟಾಪರ್ ಆಗಿ ಹೊರ ಹೊಮ್ಮಿದ್ದಾಳೆ. ತಾಲ್ಲೂಕಿನ ಕ್ಷೇತ್ರಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ಶಿಕ್ಷಕರನ್ನು ಮತ್ತು ಮಕ್ಕಳನ್ನು ಅಭಿನಂದಿಸಿದ್ದಾರೆ. ಜೊತೆಗೆ ಉಪ ಪ್ರಾಂಶುಪಾಲರಾದ ನಾಗೇಂದ್ರಪ್ಪ, ವಿಶ್ರಾಂತ ನ್ಯಾಯಾಧೀಶರಾದ ಬಿಲ್ಲಪ್ಪ ಹಾಗೂ ಎಸ್ ಡಿ ಎಂ ಸಿ ಅಧ್ಯಕ್ಷ ಮಂಜುನಾಥ್ ಸೇರಿದಂತೆ ಸದಸ್ಯರು, ಶಾಲಾ ಶಿಕ್ಷಕರು ಮತ್ತು ಸಾರ್ವಜನಿಕರು ಮಕ್ಕಳನ್ನು ಅಭಿನಂದಿಸಿದ್ದಾರೆ.

ಬಾಲ್ಯ ವಿವಾಹ ತಡೆಗಟ್ಟಿ ಮಕ್ಕಳ ಬಾಳ ಬೆಳಗಿಸಿ

» ಹೊಸದುರ್ಗ

ತಾಲೂಕು ಆರೋಗ್ಯಾಧಿಕಾರಿ ಡಾ.ಜಿ ಎಸ್ ರಾಘವೇಂದ್ರ ಪ್ರಸಾದ್ ಮಾತನಾಡಿ 'ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧ' ಬಾಲ್ಯ ವಿವಾಹ ತಡೆಗಟ್ಟಿ ಮಕ್ಕಳ ಬಾಳ ಬೆಳಗಿಸಿ, ಬಾಲ್ಯ ವಿವಾಹವನ್ನು ತಡೆಗಟ್ಟಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಕಠಿಣ ಶಾಸನವನ್ನು ಜಾರಿಗೊಳಿಸಿದ್ದು ಬಾಲ್ಯ ವಿವಾಹ ಕೆಲಸಕ್ಕೆ ಕೈ ಹಾಕಿದರೆ ಶಿಕ್ಷೆ ಕಟ್ಟಿಟ್ಟ ಬುತ್ತಿ ಎಂದು ತಾಲೂಕ ಆರೋಗ್ಯ ಅಧಿಕಾರಿ ರಾಘವೇಂದ್ರಪ್ರಸಾದ್ ತಿಳಿಸಿದರು

ತಾಲೂಕಿನ ಮತ್ತೊಡು ಹೋಬಳಿ ಹುಣಸೆಕಟ್ಟೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಚಿತ್ರದುರ್ಗ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿತ್ರದುರ್ಗ, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಹೊಸದುರ್ಗ. ಹಾಗೂ ಸಮುದಾಯ ಆರೋಗ್ಯ ಕೇಂದ್ರ ಕೆ ಕೆ ಪುರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಗುಡ್ಡದ ನೇರಲಕೇರೆ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಕಿಶೋರ್ ಸ್ವಾಸ್ಥ್ಯ ಕಾರ್ಯಕ್ರಮ ಅಡಿಯಲ್ಲಿ *ಬಾಲ್ಯ ವಿವಾಹ ನಿಷೇಧ* ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು

ಮಾತನಾಡಿದ ಅವರು ಅತಿ ಚಿಕ್ಕ ವಯಸ್ಸಿನಲ್ಲಿ ಬಾಲ್ಯ ವಿವಾಹದಿಂದ ಗಂಡು ಮತ್ತು ಹೆಣ್ಣಿನ ಭವಿಷ್ಯ ಕುಂದುತ್ತದೆ. ಬಾಲ್ಯ ವಿವಾಹ ಎಂದರೇನು? ಬಾಲ್ಯ ವಿವಾಹ ಅಪರಾಧಕ್ಕೆ ಶಿಕ್ಷೆ, ಬಾಲ್ಯ ವಿವಾಹಕ್ಕೆ ಸಂಬಂಧಿಸಿದಂತೆ ಮಕ್ಕಳ ಸಹಾಯವಾಣಿ –1098 ಮತ್ತು ಬಾಲ್ಯ ವಿವಾಹ ಕಾಯಿದೆ –2006 ಯ ಸಂಪೂರ್ಣ ಮಾಹಿತಿಯನ್ನೂ ಸಾರ್ವಜನಿಕರು ಈ ದೂರವಾಣಿ ಸಂಖ್ಯೆಗೆ ಕರೆ ಮಾಡುವುದರ ಮೂಲಕ ಬಾಲ್ಯ ವಿವಾಹವನ್ನು ತಡೆಗಟ್ಟಬಹುದು ಎಂದು ತಿಳಿಸಿದರು.

ಆರ್ ಕೆ ಎಸ್ ಕೆ ,ಆಪ್ತ ಸಮಾಲೋಚಕ ಸಂಗಮೇಶ ಮಮಟಗೇರಿ ಇವರು "ಆಗಲಿ ಬಿಡಿ ಹೆಣ್ಣಿಗೆ ಹದಿನೆಂಟು, ಈಗಲೇ ಏಕೆ ತಾಳಿಯ ನಂಟು" 18 ವರ್ಷ ಒಳಗಿನ ಹೆಣ್ಣನ್ನ ಶಿಕ್ಷಣದ ಜೊತೆ ಜೋಡಿಸಿ ಬದುಕು ಕಟ್ಟಿಕೊಳ್ಳಲು ದಾರಿ ಮಾಡಿಕೊಡಬೇಕು. ಈ ಶಿಕ್ಷಶಿತರ ಕಾಲದಲ್ಲಿ ಬಾಲ್ಯ ವಿವಾಹದ ಮಾಡುವ ಬದಲು ಮಕ್ಕಳನ್ನು ಒಳ್ಳೆಯ ವಿದ್ಯಾವಂತರನ್ನಾಗಿ ಬೆಳಸಿ ಅವರ ಜೀವನವನ್ನು ನಡೆಸಿಕೊಂಡು ಹೋಗುವಂತೆ ಬೆಳೆಸೋಣ ಎಂದು ತಿಳಿಸಿದರು.

ಗುಡ್ಡದ ನೆರಲಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯ ಡಾಕ್ಟರ್ ಶಶಿ ಕಿರಣ್ ಕುಮಾರ್ ಮಾತನಾಡಿ ಬಾಲ್ಯವಿವಾಹದಿಂದ ಆರೋಗ್ಯ ಮೇಲಾಗುವ ಪರಿಣಾಮಗಳ ಬಗ್ಗೆ ತಿಳಿಸಿದರು. ಮತ್ತು "ಬಾಲ್ಯ ವಿವಾಹ ಮಾಡಬೇಡಿ, ಮಾಡಿ ಶಿಕ್ಷಗೆ ಗುರಿಯಾಗಬೇಡಿ" ಎಂದು ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಕಾರ್ಯಕ್ರಮದಲ್ಲಿ , ಗ್ರಾ ಪಂ, ಸದಸ್ಯ ರಂಗಪ್ಪ, ಮಾಜಿ ಸದಸ್ಯ ಕರಿಬಸಪ್ಪ, ಮಾಜಿ ತಾ ಪಂ ಸದಸ್ಯ ತಿಪ್ಪೇಸ್ವಾಮಿ, ಗ್ರಾಮ ಪಂಚಾಯತ್ ಕಾರ್ಯದರ್ಶಿಗಳು ಜಿ ಎನ್ ಕೇರೆ, ಹಾಗೂ ಆರೋಗ್ಯ ಇಲಾಖೆಯ ಎಲ್ಲಾ ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯರು. ಇತರರು ಉಪ್ಥಿತರಿದ್ದರು.

ಬಿತ್ತನೆ ಬೀಜ, ಗೊಬ್ಬರ ಪೂರೈಕೆಗೆ ಕ್ರಮವಹಿಸಿ

» ಮೊದಲ ಪುಟದಿಂದ

ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ್ ಮಾತನಾಡಿ, ಜಿಲ್ಲೆಯಲ್ಲಿ ಕೃಷಿ ಚಟುವಟಿಕೆಗಳಿಗೆ ಸಂಬಂಧಪಟ್ಟಂತೆ ಯಾವುದೇ ರೀತಿಯ ಸಮಸ್ಯೆಗಳು ಬರಬಾರದು ಎಂಬ ಉದ್ದೇಶದಿಂದ ಜಿಲ್ಲಾಧಿಕಾರಿಗಳ ಸೂಚನೆ ಮೇರೆಗೆ ಮುಂಗಾರು ಹಂಗಾಮು ಪೂರ್ವ ಸಿದ್ಧತೆ ಕುರಿತು ಸೂಕ್ತ ಕ್ರಮಕೈಗೊಳ್ಳುವ ನಿಟ್ಟಿನಲ್ಲಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯ ಸುಮಾರು 80 ಸಾವಿರ ರೈತರಿಗೆ ರೂ.284 ಕೋಟಿ ಬೆಳೆವಿಮೆ ಪಾವತಿಯಾಗಿದೆ. ಇದರ ಜೊತೆಗೆ ರೂ. 144 ಕೋಟಿ ಬೆಳೆಹಾನಿ ಪರಿಹಾರ ಸೇರಿದಂತೆ ಒಟ್ಟು ರೂ.400 ಕೋಟಿ ಪರಿಹಾರದ ಹಣ ರೈತರ ಖಾತೆಗೆ ಜಮೆ ಮಾಡಲಾಗಿದೆ ಎಂದರು.

ಕೃಷಿ ಪರಿಕರಗಳ ವ್ಯವಸ್ಥಿತ ವಿತರಣೆಗೆ ಜೊತೆಜೊತೆಗೆ ನವೀನ ತಾಂತ್ರಿಕತೆ ಅಳವಡಿಕೆ ಹಾಗೂ ರೈತರ ಆದಾಯ ಹೆಚ್ಚಿಸುವ ನಿಟ್ಟಿನಲ್ಲಿ ಮುಂಗಾರು ಹಂಗಾಮಿನಲ್ಲಿ ಕಾರ್ಯಕ್ರಮ, ರೂಪುರೇಷೆಗಳನ್ನು ಕೈಗೊಳ್ಳಲಾಗಿದೆ. ಈಬಾರಿಯ ಮುಂಗಾರು ಉತ್ತಮ ಆಶದಾಯಕವಾಗಿದ್ದು, ಕಳೆದ 10 ದಿನಗಳಿಂದ ಜಿಲ್ಲೆಯಾದ್ಯಂತ ವ್ಯಾಪಕವಾಗಿ ಮಳೆಯಾಗುತ್ತಿದ್ದು, ಶೇ.9ರಷ್ಟು ಹೆಚ್ಚುವರಿ ಮಳೆಯಾಗಿದೆ ಎಂದು ಮಾಹಿತಿ ನೀಡಿದರು. ಜಿಲ್ಲೆಯಲ್ಲಿ 7 ಲಕ್ಷ 70 ಸಾವಿರ ಹೆಕ್ಟೇರ್ ಪ್ರದೇಶವಿದ್ದು, ಜಿಲ್ಲೆಯ ಆರು ತಾಲ್ಲೂಕುಗಳು ಸಹ ಭೌಗೋಳಿಕ ಭಿನ್ನತೆಯನ್ನು ಕಾಣಬಹುದಾಗಿದೆ. ಕೃಷಿ ಪ್ರಧಾನ ಜಿಲ್ಲೆಯಾಗಿರುವ ಚಿತ್ರದುರ್ಗದಲ್ಲಿ ಶೇ.75ರಷ್ಟು ಮುಂಗಾರು ಆಧಾರಿತ ಕೃಷಿ ಜಿಲ್ಲೆಯಲ್ಲಿದೆ. ಮುಂಗಾರು ಹಂಗಾಮಿನಲ್ಲಿ ಕೃಷಿ ಬೆಳೆಗಳಾದ ಸುಮಾರು 3 ಲಕ್ಷ 4 ಸಾವಿರ ಹೆಕ್ಟೇರ್ ಮುಂಗಾರು ಹಂಗಾಮಿನಲ್ಲಿ ಬಿತ್ತನೆಯಾಗುವ ಪ್ರದೇಶವಾಗಿದೆ. ಪ್ರಮುಖವಾಗಿ 1 ಲಕ್ಷ 14 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಶೇಂಗಾ ಬಿತ್ತನೆ, ಮುಸುಕಿನ ಜೋಳ ಸುಮಾರು 90 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಲಿದೆ. 50 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ರಾಗಿ ಬಿತ್ತನೆಯಾಗಲಿದೆ. 21 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಸಿರಿಧಾನ್ಯಗಳು ಬಿತ್ತನೆಯಾಗಲಿದೆ. ರಾಜ್ಯದಲ್ಲಿಯೇ ಚಿತ್ರದುರ್ಗ ಜಿಲ್ಲೆಯಲ್ಲಿ ವಿಶೇಷವಾಗಿ ಹೊಸದುರ್ಗ ತಾಲ್ಲೂಕಿನಲ್ಲಿ 18 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಸಿರಿಧಾನ್ಯಗಳನ್ನು ಬೆಳೆಯಲಾಗುತ್ತಿದೆ. ಇದಕ್ಕೆ ಪೂರಕವಾಗಿ ಈ ಬಾರಿ 4 ಕೋಟಿ ವೆಚ್ಚದಲ್ಲಿ ಸಿರಿಧಾನ್ಯ ಮೌಲ್ಯವರ್ಧನೆಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಮುಂಗಾರು ಹಂಗಾಮಿಗೆ ಸಂಬಂಧಪಟ್ಟಂತೆ ಜಿಲ್ಲೆಗೆ 64 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ಅವಶ್ಯಕತೆ ಇದೆ. 12 ಸಾವಿರ ಮೆಟ್ರಿಕ್ ಟನ್ ಡಿಎಪಿ ರಸಗೊಬ್ಬರ ಬಿತ್ತನೆ ಸಂದರ್ಭದಲ್ಲಿ ಅವಶ್ಯಕತೆ ಇದ್ದು, ಪ್ರಸ್ತುತ 4 ಸಾವಿರ ಮೆಟ್ರಿಕ್ ಟನ್ ಡಿಎಪಿ ರಸಗೊಬ್ಬರ ದಾಸ್ತಾನು ಇದೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಕೃಷಿ ಪರಿಕರಗಳ ಮಾರಾಟಗಾರರ ಸಂಘದ ಅಧ್ಯಕ್ಷ ರೇವಣಸಿದ್ದಪ್ಪ ಮಾತನಾಡಿ, ರಸಗೊಬ್ಬರ ಸಮರ್ಪಕ ಪೂರೈಕೆ ಮಾಡುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ರೇಕ್ ಪಾಯಿಂಟ್ ಅವಶ್ಯಕತೆ ಇದೆ. ದಾವಣಗೆರೆ ರೇಕ್ ಪಾಯಿಂಟ್‌ನಿಂದ ಚಿತ್ರದುರ್ಗ ಜಿಲ್ಲೆಗೆ ರಸಗೊಬ್ಬರ ಸರಬರಾಜು ಮಾಡಲಾಗುತ್ತಿದೆ. ಹಾಗಾಗಿ ಜಿಲ್ಲೆಗೆ ರೇಕ್ ಪಾಯಿಂಟ್ ಅವಶ್ಯಕತೆ ಇದೆ. ಈ ಕುರಿತು ಜಿಲ್ಲಾಧಿಕಾರಿಗಳು ಅಗತ್ಯ ಕ್ರಮವಹಿಸಬೇಕು ಎಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ನಗರದ ಜಿಲ್ಲಾ ಪಂಚಾಯಿತಿ ಆವರಣದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಔಷಧಿ ಸಿಂಪರಣೆ ಮಾಡುವ ಡ್ರೋನ್‌ಗಳಿಗೆ ಚಾಲನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ತಿಮ್ಮಪ್ಪ, ಬಬ್ಬೂರು ಕೃಷಿ ವಿಜ್ಞಾನ ಕೇಂದ್ರದ ಕೃಷಿ ವಿಜ್ಞಾನಿ ಓಂಕಾರಪ್ಪ, ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವ್ಯವಸ್ಥಾಪಕ ತಿಪ್ಪೇಶ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಸವಿತಾ, ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಕುಮಾರಸ್ವಾಮಿ, ಉಪಕೃಷಿ ನಿರ್ದೇಶಕರಾದ ಶಿವಕುಮಾರ್, ಪ್ರಭಾಕರ್, ಸಹಾಯಕ ಕೃಷಿ ನಿರ್ದೇಶಕರಾದ ಚಂದ್ರಕುಮಾರ್, ಪ್ರವೀಣ್ ಚೌಧರಿ, ತಹಶೀಲ್ದಾರ್ ಡಾ.ನಾಗವೇಣಿ, ಇಫ್ಕೊ ಸಂಸ್ಥೆಯ ಜಿಲ್ಲಾಮಟ್ಟದ ಅಧಿಕಾರಿ ಚಿದಂಬರಂ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಕೃಷಿ ಪರಿಕರಗಳ ಮಾರಾಟಗಾರರು ಇದ್ದರು.

ಸಿಬ್ಬಂದಿಗಳಿಂದ ಪ್ರತಿಜ್ಞಾವಿಧಿ ಸ್ವೀಕಾರ

» ದಾವಣಗೆರೆ

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮೇ 21 ರಂದು ಭಯೋತ್ಪಾದಕ ವಿರೋಧಿ ದಿನದ ಪ್ರಯುಕ್ತ ಅಧಿಕಾರಿಗಳು ಹಾಗೂ ಸಿಬ್ಬಂದಿಯವರಿಂದ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು.ಈ ವೇಳೆ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ಪ್ರತಿಜ್ಞಾವಿಧಿ ಬೋಧಿಸಿ ಅಹಿಂಸೆ ಹಾಗೂ ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯ ಪರಂಪರೆಯಲ್ಲಿ ದೃಢ ವಿಶ್ವಾಸವುಳ್ಳ ಭಾರತದ ಪ್ರಜೆಗಳಾದ ನಾವು ಎಲ್ಲ ಬಗೆಯ ಭಯೋತ್ಪಾದನೆ ಮತ್ತು ಹಿಂಸೆಯನ್ನು ನಮ್ಮೆಲ್ಲ ಶಕ್ತಿ, ಸಾಮರ್ಥ್ಯದಿಂದ ಎದುರಿಸುತ್ತೇವೆ. ಹಾಗೂ ನಮ್ಮ ಸಹಬಾಂಧವರಲ್ಲಿ ಶಾಂತಿ, ಸಾಮಾಜಿಕ ಸೌಹಾರ್ಧತೆ ಮತ್ತು ಪರಸ್ಪರ ಅರಿವನ್ನು ಸಾಧಿಸಲು ಹಾಗೂ ಉತ್ತೇಜಿಸಲು, ಮಾನವ ಜೀವಕ್ಕೆ ಹಾಗೂ ಮೌಲ್ಯಗಳಿಗೆ ಬೆದರಿಕೆ ಒಡ್ಡುತ್ತಿರುವ ವಿಚ್ಛಿದ್ರಕಾರಿ ಶಕ್ತಿಗಳ ವಿರುದ್ಧ ಹೋರಾಡಲು ಪಣ ತೊಡುತ್ತೇವೆ ಎಂದು ಪ್ರತಿಜ್ಞೆ ಸ್ವೀಕರಿಸಲಾಯಿತು. ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕ ಸಿದ್ದರಾಮ್ ಮರಿಹಾಳ್, ಡಿಡಿಎಲ್‌ಆರ್ ಭಾವನಾ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

ಮಾಜಿ ಸೈನಿಕರು ವಾಸಸ್ಥಳ ಬದಲಾವಣೆ ವಿಳಾಸ ನೀಡಲು ಕೋರಿಕೆ

» ದಾವಣಗೆರೆ

ಮಾಜಿ ಸೈನಿಕರು ಹಾಗೂ ಮಾಜಿ ಸೈನಿಕರ ಅವಲಂ ಭಿತರು ತಮ್ಮ ಮನೆಯ ವಿಳಾಸ ಬದಲಾವಣೆಯಾಗಿದ್ದಲ್ಲಿ ವಿವರವನ್ನು ಸೈನಿಕ ಕಲ್ಯಾಣ ಮತ್ತು ಮನರ್ವಸತಿ ಇಲಾಖೆ, ಶಿವಮೊಗ್ಗ ಕಚೇರಿಗೆ ಪ್ರಸ್ತುತ ವಾಸವಿ ರುವ ಸ್ಥಳದ ಸ್ಥಳೀಯ ಗ್ರಾಮ ಪಂಚಾಯತಿ, ನಗರಸಭೆ ಅಥವಾ ಯಾವುದೇ ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿದ ನ

ಬಿಜೆಪಿ ಅಭ್ಯರ್ಥಿಗೆ ಪ್ರಾಶಸ್ತ್ಯದ ಮತ ನೀಡಿ

» ಚಿತ್ರದುರ್ಗ

ವಿಧಾನಸಭೆಯಲ್ಲಿ ಮನ ಬಂದಂತೆ ಪಾಸ್ ಮಾಡುವ ಬಿಲ್‌ಗಳನ್ನು ವಿಧಾನಪರಿಷತ್‌ನಲ್ಲಿ ತಿರಸ್ಕರಿಸಬೇಕಾದರೆ ಬಹುಮತವಿರಬೇಕು. ಅದಕ್ಕಾಗಿ ಈ ಬಾರಿಯ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆಸ್ಪರ್ಧಿಸಿರುವಬಿಜೆಪಿ.ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿರವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸುವಂತೆ ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಶಿಕ್ಷಕರುಗಳಲ್ಲಿ ಮನವಿ ಮಾಡಿದರು.

ರಾಷ್ಟ್ರೀಯ ಹೆದ್ದಾರಿ–13 ಪಿಳ್ಳೆಕೆರನಹಳ್ಳಿಯಲ್ಲಿರುವ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ವೈ.ಎ.ನಾರಾಯಣಸ್ವಾಮಿರವರ ಪರ ಬುಧವಾರ ಮತಯಾಚಿಸಿ ಮಾತನಾಡಿದರು.

ನರೇಂದ್ರಮೋದಿ ದೇಶದ ಪ್ರಧಾನಿಯಾದಾಗಿನಿಂದಲೂ ಅಂತರಾಷ್ಟ್ರೀಯ ಮಟ್ಟದಲ್ಲಿ ಭಾರತಕ್ಕೆ ಗೌರವ ಸಿಕ್ಕಿದೆ. ವಿಧಾನಸಭೆಯಲ್ಲಿ ಕಾಂಗ್ರೆಸ್ ಮಾಡುವ ಕಾನೂನುಗಳನ್ನು ಮೇಲ್ಮನೆಗೆ ಕಳಿಸಿದಾಗ ಅಲ್ಲಿ ತೀರ್ಮಾನಿಸಲು ಪಕ್ಷಕ್ಕೆ ಬಹುಮತವಿರಬೇಕು. ಹಾಗಾಗಿ ವಿಧಾನಪರಿಷತ್ ಚುನಾವಣೆ ಅತ್ಯಂತ ಮಹತ್ವದ್ದು, ಮತ ಪಡೆಯುವುದಕ್ಕಾಗಿ ಕಾಂಗ್ರೆಸ್ ಪಕ್ಷ ವಿಧಾನಸಭೆ ಚುನಾವಣೆಗೆ ಮುನ್ನ ಉಚಿತ ಗ್ಯಾರೆಂಟಿಗಳನ್ನು ನೀಡಿ ಜನರ ಮನವೊಲಿಸಿತು. ಪ್ರಧಾನಿ ನರೇಂದ್ರಮೋದಿರವರು ಏನು ಬೇಕಾದರೂ ಉಚಿತ ಗ್ಯಾರೆಂಟಿಗಳನ್ನು ನೀಡಬಹುದಿತ್ತು. ದೇಶ ದಿವಾಳಿಯಾಗಿಸಲು ಅವರಿಗೆ ಇಷ್ಟವಿಲ್ಲ. ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಒಬ್ಬ ಮಹಿಳೆಗೆ ಒಂದು ಲಕ್ಷ ರೂ.ಗಳನ್ನು ನೀಡುವುದಾಗಿ ಘೋಷಿಸಿದೆ. ಅದಕ್ಕಾಗಿ 84 ಲಕ್ಷ ಕೋಟಿ ರೂ.ಗಳು ಬೇಕಾಗುತ್ತದೆ. ಹಣ ಎಲ್ಲಿಂದ ತರುತ್ತಾರೆಂದು ಪ್ರಶ್ನಿಸಿದರು?

ನರೇಂದ್ರಮೋದಿರವರ ಪಾರದರ್ಶಕ ಆಡಳಿತಕ್ಕೆ ಅಮೇರಿಕಾ, ಬ್ರಿಟನ್, ಜರ್ಮನ್, ರಷ್ಯ ದೇಶಗಳಿಗೆ ನಡುಕ ಉಂಟಾಗಿದೆ. ಮತ್ತೊಮ್ಮೆ ಮೋದಿ ದೇಶದ ಪ್ರಧಾನಿಯಾಗುವುದು ಖಚಿತ ಎಂದು ಹೇಳಿದರು.ವಿಧಾನ ಪರಿಷತ್ ಸದಸ್ಯ ಅರುಣ್ ಶಹಾಪುರ್ ಮಾತನಾಡಿ ದೇಶದಲ್ಲಿ ನಿರುದ್ಯೋಗ ಹೋಗಲಾಡಿಸಬೇಕಾದರೆ ಮೊದಲು ಶಿಕ್ಷಣ ಬೇಕು. ಪ್ರಧಾನಿ ಮೋದಿರವರು ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ತರಲು ಹೊರಟಿದ್ದಾರೆ. ಆದರೆ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಮಾತ್ರ ಇದು ಬೇಕಿಲ್ಲ. 6, 9 ನೇ ತರಗತಿಗೆ ಸಿ.ಬಿ.ಎಸ್.ಇ. ಐಸಿಎಸ್‌ಇ. ನಲ್ಲಿ ಬದಲಾವಣೆ ಪರ್ವ ಆರಂಭವಾಗಿದೆ. ಅನರ್ಹರಿಗೆ ರಾಜ್ಯದಲ್ಲಿ ಅಧಿಕಾರ ಸಿಕ್ಕಿರುವುದು ಭವಿಷ್ಯಕ್ಕೆ ಮಾರಕವಾಗಿದೆ. ಎಸ್.ಎಂ.ಕೃಷ್ಣ ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ 2021–22 ರಲ್ಲಿ ಅನುದಾನಿತ ಶಾಲೆಗಳಿಗೆ ನೀಡಲಾಗಿದ್ದ ಅನುದಾನವನ್ನು ಹಿಂದಕ್ಕೆ ಪಡೆದಾಗ ಶಿಕ್ಷಕರ ಪರವಾಗಿ ದೊಡ್ಡ ಹೋರಾಟ ಮಾಡಿದೆವು. ಖಾಸಗಿ ಶಿಕ್ಷಣ ವ್ಯವಸ್ಥೆ ಈಗಲೂ ರಾಜ್ಯದಲ್ಲಿ ಉಳಿದಿದೆ ಎನ್ನುವುದಾದರೆ ಅದು ಬಿ.ಎಸ್.ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಎನ್ನುವುದನ್ನು ಶಿಕ್ಷಕರುಗಳಿಗೆ ನೆನಪಿಸಿದರು.

ಆಗ್ನೇಯ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ ಕೋವಿಡ್‌ನಲ್ಲಿ ಜೀವಕ್ಕೆ ಹೆದರದೆ ಶಿಕ್ಷಕರುಗಳಿಗೆ ಕಿಟ್‌ಗಳನ್ನು ನೀಡಿದರು. ಶಿಕ್ಷಣ ಕ್ಷೇತ್ರಕ್ಕೆ ಬೇಕಾಗಿರುವ ಗಟ್ಟಿ ಧ್ವನಿಯುಳ್ಳ ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸಿ ಎಂದು ಶಿಕ್ಷಕರುಗಳಲ್ಲಿ ಮನವಿ ಮಾಡಿದರು.

ಸದನದಲ್ಲಿ ಶಿಕ್ಷಕರುಗಳ ಬೇಡಿಕೆ, ಸಮಸ್ಯೆಗಳ ಬಗ್ಗೆ ಹಿಂದಿನಿಂದಲೂ ಜಗಳವಾಡುತ್ತಿದ್ದೇವೆ. ಶಿಕ್ಷಣ ವ್ಯವಸ್ಥೆಯನ್ನು ಹೊಸ ಉತ್ತುಂಗಕ್ಕೆ ತೆಗೆದುಕೊಂಡು ಹೋಗಬೇಕಾಗಿರುವುದರಿಂದ ಮುಂದಿನ ತಿಂಗಳು ಮೂರನೆ ತಾರೀಖು ನಡೆಯುವ ಚುನಾವಣೆಯಲ್ಲಿ ವೈ.ಎ.ನಾರಾಯಣಸ್ವಾಮಿರವರನ್ನು ಗೆಲ್ಲಿಸಿ. ಆತ್ಮವಿಶ್ವಾಸದಿಂದ ಪರೀಕ್ಷೆಗಳನ್ನು ಎದುರಿಸಿ ಶಿಕ್ಷಕರುಗಳಾಗಿ ಎಂದು ತಿಳಿಸಿದರು.

ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಕೆ.ಎಂ.ವೀರೇಶ್, ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ, ಗ್ರಾಮಾಂತರ ಮಂಡಲ ಅಧ್ಯಕ್ಷ ಕಲ್ಲೇಶಯ್ಯ, ಶಿಕ್ಷಣ ಜಯಣ್ಣ ವೇದಿಕೆಯಲ್ಲಿದ್ದರು. ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಶೈಲಜಾರೆಡ್ಡಿ, ಬಿಜೆಪಿ. ಉಪಾಧ್ಯಕ್ಷೆ ಚಂದ್ರಿಕ ಲೋಕನಾಥ್, ನಗರ ಮಂಡಲ ಅಧ್ಯಕ್ಷ ನವೀನ್ ಚಾಲುಕ್ಯ, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ವಕ್ತಾರ ನಾಗರಾಜ್‌ಬೇದ್ರೆ, ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಶ್ರೀಮತಿ ಜಯಲಕ್ಷ್ಮಿ, ಉಪ ಪ್ರಾಂಶುಪಾಲರಾದ ಶಿವಕುಮಾರ್ ಈ ಸಂದರ್ಭದಲ್ಲಿದ್ದರು.

ಫಾಸ್ಟ್ ನ್ಯೂಸ್

ಕಾಣೆ: ಪತ್ತೆಗೆ ಮನವಿ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಗ್ರಾಮದ ಯೋಗೇಶ್ ತಂದೆ ಓಂಕಾರಪ್ಪ (ಸು.50 ವರ್ಷ), ಲಕ್ಷ್ಮೀಸಾಗರ ಗ್ರಾಮದ ನಯನ ತಂದೆ ತಿಪ್ಪೇಸ್ವಾಮಿ (ಸು.19 ವರ್ಷ) ಮತ್ತು ಇಸಾಮುದ್ರ ಗೊಲ್ಲರಹಟ್ಟಿ ಗ್ರಾಮದ ಅಂಕಿತಾ ತಂದೆ ರಾಜಾನಾಯ್ಕ (ಸು.19 ವರ್ಷ) ಈ ಮೂವರು ಕಾಣೆಯಾದ ಪ್ರಕರಣ ಭರಮಸಾಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಯೋಗೇಶ್ ತಂದೆ ಓಂಕಾರಪ್ಪ 5.5 ಅಡಿ ಎತ್ತರ, ದುಂಡುಮುಖ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಬಿಳಿ ಶರ್ಟ್, ತಿಳಿ ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಕಾಣೆಯಾದ ಅಂಕಿತಾ ತಂದೆ ರಾಜಾನಾಯ್ಕ, 19 ವರ್ಷ, 5 ಅಡಿ ಎತ್ತರ, ಕೋಲುಮುಖ, ಗೋದಿ ಮೈ ಬಣ್ಣ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ನೀಲಿ ಬಿಳಿ ಬಣ್ಣದ ಟಾಪ್ ಮತ್ತು ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾರೆಕಾಣೆಯಾದ ನಯನ ತಂದೆ ತಿಪ್ಪೇಸ್ವಾಮಿ, 19 ವರ್ಷ ಇವರು ಸುಮಾರು 5 ಅಡಿ ಎತ್ತರ, ಕೋಲುಮುಖ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಚೂಡಿದಾರ್ ಧರಿಸಿರುತ್ತಾರೆ. ಮೇಲ್ಕಂಡ ಚಹರೆಯುಳ್ಳ ಕಾಣೆಯಾದವರು ಕುರಿತು ಮಾಹಿತಿ ಕಂಡುಬಂದಲ್ಲಿ ಭರಮಸಾಗರ ಪೋಲಿಸ್ ಠಾಣೆ ದೂರವಾಣಿ ಸಂಖ್ಯೆ: 08194–258421 ಅಥವಾ ಮೊ. 9480803163 ಗೆ ಸಂಪರ್ಕಿಸಬಹುದು ಎಂದು ಭರಮಸಾಗರ ಪೋಲಿಸ್ ಠಾಣೆಯ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನಧಿಕೃತ ಲೂಸ್ ಬಿತ್ತನೆ ಬೀಜಗಳ ಬಗ್ಗೆ ಎಚ್ಚರಿಕೆ

» ದಾವಣಗೆರೆ

ಪ್ರಸಕ್ತ ಮುಂಗಾರು ಹಂಗಾಮು ಚುರುಕಾಗಿದ್ದು, ಭೂಮಿ ಸಿದ್ಧತೆ, ಸಮಗ್ರ ಬೆಳೆ ನಿರ್ವಹಣೆ ಜೊತೆಗೆ ಉತ್ತಮ ಇಳುವರಿ ಪಡೆಯುವಲ್ಲಿ ಗುಣಮಟ್ಟದ ಬಿತ್ತನೆ ಬೀಜಗಳು ಬಹು ಮುಖ್ಯ. ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬಂತೆ ಉತ್ತಮ ಬೆಳವಣಿಗೆ ಹಾಗೂ ಇಳುವರಿ ಪಡೆಯುವಲ್ಲಿ ಗುಣಮಟ್ಟದ ಬಿತ್ತನೆ ಬೀಜಗಳು ಅತ್ಯಮೂಲ್ಯವಾಗಿವೆ. ಈ ನಿಟ್ಟಿನಲ್ಲಿ ರೈತರು ಬಿತ್ತನೆ ಬೀಜ ಖರೀದಿ ಮಾಡುವಾಗ ಎಚ್ಚರ ವಹಿಸಬೇಕೆಂದು ಜಂಟಿ ಕೃಷಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ರೈತ ಸಂಪರ್ಕ ಕೇಂದ್ರಗಳಲ್ಲಿ ಹಾಗೂ ನಿಗಧಿಪಡಿಸಿದ ಸಹಕಾರಿ ಸಂಘಗಳ ಮೂಲಕ ರಿಯಾಯತಿ ದರದಲ್ಲಿ ವಿವಿಧ ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗುವುದು. ಜಿಲ್ಲೆಯ ವಿವಿಧ ಕೃಷಿ ಪರಿಕರ ಮಾರಾಟ ಮಳಿಗೆಗಳಲ್ಲಿ ಗುಣಮಟ್ಟದ ಬಿತ್ತನೆ ಬೀಜಗಳು ಲಭ್ಯವಿದ್ದು, ರೈತರಿಗೆ ಯಾವುದೇ ಬಿತ್ತನೆ ಬೀಜಗಳ ಕೊರತೆ ಇರುವುದಿಲ್ಲ. ಆದರೆ ಇತ್ತೀಚಿನ ದಿನಗಳಲ್ಲಿ ಕಳಪೆ, ಬಿಡಿ ಬಿತ್ತನೆ ಬೀಜದ ಹಾವಳಿ ಹೆಚ್ಚಾಗುತ್ತಿದೆ. ಅಲ್ಲಲ್ಲಿ ರೈತರು ಅನಧಿಕೃತ ಲೂಸ್ ಬಿತ್ತನೆ ಬೀಜಗಳನ್ನು ಖರೀದಿಸುತ್ತಿರುವುದಾಗಿ ತಿಳಿದು ಬಂದಿದೆ. ಹಲವರು ಲೂಸ್ ಬೀಜಗಳನ್ನು ವಿವಿಧ ಭಾಗಗಳಿಂದ ಸಂಗ್ರಹಿಸಿ ರೈತರಿಗೆ ಮಾರಾಟ ಮಾಡುತ್ತಿದ್ದಾರೆ. ರೈತರು ಬಿಡಿ ಬೀಜಗಳನ್ನು ಖರೀದಿಸಿ ಬಿತ್ತನೆ ಮಾಡಿ ತೊಂದರೆ ಹಾಗೂ ಬೆಳೆ ನಷ್ಟ ಅನುಭವಿಸಿದಲ್ಲಿ ಯಾವುದೇ ದಾಖಲೆಗಳು ಇಲ್ಲದಿರುವ್ದರಿಂದ ಪರಿಹಾರ ಪಡೆಯಲು ಅರ್ಹರಾಗುವುದಿಲ್ಲ. ಆದ್ದರಿಂದ ರೈತರು ಲೂಸ್ ಬಿತ್ತನೆ ಬೀಜ ಮಾರಾಟ ಜಾಲಕ್ಕೆ ಸಿಲುಕದೇ ಉತ್ತಮ ಗುಣಮಟ್ಟದ ದೃಢೀಕೃತ ಬಿತ್ತನೆ ಬೀಜಗಳನ್ನು ರೈತ ಸಂಪರ್ಕ ಕೇಂದ್ರಗಳಿಂದ ಅಧಿಕೃತ ಕೃಷಿ ಪರಿಕರ ಮಾರಾಟಗಾರರಿಂದ ಖರೀದಿಸಿ ಬಿತ್ತನೆ ಮಾಡಬೇಕು. ಜಿಲ್ಲೆಯಲ್ಲಿ ಯಾವುದೇ ಅನಧಿಕೃತ ಲೂಸ್ ಬಿತ್ತನೆ ಬೀಜ ದಾಸ್ತಾನು ಹಾಗೂ ಮಾರಾಟ ಮಾಡುವವರು ಕಂಡು ಬಂದಲ್ಲಿ ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ) ಮೊ.ಸಂ. 8277931106 & 8277931207 ರವರಿಗೆ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು , ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿಗಳನ್ನು ಸಂಪರ್ಕಿಸಬೇಕೆಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಜಿಲ್ಲಾ ಆಸ್ಪತ್ರೆಯಲ್ಲಿ ಹೃದಯಘಾತ, ಪಾರ್ಶ್ವವಾಯು ರೋಗಕ್ಕೆ ಔಷಧಿ ಲಭ್ಯ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ಪುನೀತ್ ರಾಜ್‌ಕುಮಾರ್ ಹೃದಯ ಜ್ಯೋತಿ ಯೋಜನೆಯಡಿಯಲ್ಲಿ ಹೃದಯಘಾತ ಮತ್ತು ಪಾರ್ಶ್ವವಾಯು ರೋಗಕ್ಕೆ ಸಂಬಂಧಿಸಿದಂತೆ ಔಷಧಿಗಳು ಲಭ್ಯವಿದ್ದು, ಸಾರ್ವಜನಿಕರು ಮತ್ತು ರೋಗಿಗಳು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜಿಲ್ಲಾಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ. ಪಾರ್ಶ್ವವಾಯು ಆದ ನಂತರ 04 ಗಂಟೆಯೊಳಗಾಗಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುವುದು.

ಉಚ್ಚಂಗಿ ಯಲ್ಲಮ್ಮ ಅದ್ದೂರಿ ಮೆರವಣಿಗೆ

» ಚಿತ್ರದುರ್ಗ

ಕೋಟೆನಾಡಿನ ಪ್ರಮುಖ ಶಕ್ತಿದೇವತೆ, ರಾಜಮಾತೆ ಶ್ರೀ ಉಚ್ಚಂಗಿ ಯಲ್ಲಮ್ಮ ದೇವಿಯ ಜಾತ್ರಾ ಮಹೋತ್ಸವದ ಪ್ರಯುಕ್ತ ನಗರದಲ್ಲಿ ಬುಧವಾರ ಕೆಳಗಿಳಿಯುವ ಕಾರ್ಯಕ್ರಮದೊಂದಿಗೆ ಉತ್ಸವ ಮೂರ್ತಿಯ ಕುದುರೆ ಉತ್ಸವ ಜರುಗಿತು.

ಗರ್ಭಗುಡಿಯ ದೇವಿಗೆ ಮುಂಜಾನೆ ಅಭಿಷೇಕ ಹಾಗೂ ಮಹಾಮಂಗಳಾರತಿ ನೆರವೇರಿಸಿದ ಬಳಿಕ ಸಂಪ್ರದಾಯದಂತೆ ದೇವಿಯು ಕೆಳಗಿಳಿಯುವ ಕಾರ್ಯಕ್ರಮದೊಂದಿಗೆ ನಗರದ ರಾಜಬೀದಿಯಲ್ಲಿ ಕುದುರೆ ಉತ್ಸವ ನಡೆಸಲಾಯಿತು. ಬಳಿಕ ದೇವಸ್ಥಾನದಲ್ಲಿ ಭಕ್ತರಿಗೆ ಅನ್ನಸಂತರ್ಪಣೆ ನೆರವೇರಿಸಲಾಯಿತು.

ಕೆಳಗಿಳಿಯುವ ಕಾರ್ಯಕ್ರಮದ ಅಂಗವಾಗಿ ಚಿನ್ನ ಲೇಪಿತ ಬೆಳ್ಳಿ ಉತ್ಸವ ಮೂರ್ತಿಗೆ ಕಮಲದ ಹೂವು, ಮಲ್ಲಿಗೆ, ಸುಗಂಧರಾಜ, ಸೇವಂತಿಗೆ, ಪತ್ರೆ, ಕನಕಾಂಬರಸೇರಿದಂತೆಬಗೆಬಗೆಯಪುಷ್ಪಗಳಿಂದ ಮನಮೋಹಕವಾಗಿ ಅಲಂಕಾರ ಮಾಡಲಾಗಿತ್ತು. ಜಾತ್ರಾ ಮಹೋತ್ಸವದ ಅಂಗವಾಗಿ ಶನಿವಾರ ಅಮ್ಮನವರಿಗೆ ಕಂಕಣಧಾರಣೆ, ಮಧುವಣಗಿತ್ತಿ ಶಾಸ್ತ್ರ ನೆರವೇರಿದ್ದು, ಅಂದು ರಾತ್ರಿ ಸಿಂಹ ಉತ್ಸವ, ಭಾನುವಾರ ಸರ್ಪೋತ್ಸವ ಹಾಗೂ ಸೋಮವಾರ ನವಿಲು ಉತ್ಸವ ಜರುಗಿತು.

ಅದ್ದೂರಿ ಮೆರವಣಿಗೆ: ಮೇ.24ರ ಬೆಳಗ್ಗೆ 8ಕ್ಕೆ ದೇವಿಗೆ ಅಭಿಷೇಕ, ಮಹಾಮಂಗಳಾರತಿ, ಬಳಿಕ ನಗರದ ರಾಜ ಬೀದಿಗಳಲ್ಲಿ ಹೂವಿನ ಉಚ್ಚಾಯ ರಥೋತ್ಸವ ನೆರವೇರಲಿದೆ.ಮೇ.25ರ ಮಧ್ಯಾಹ್ನ 12ಕ್ಕೆ ದೇವಿಗೆ ವಿಶೇಷ ಭಂಡಾರದ ಪೂಜೆ ನಂತರ ಪ್ರಸಾದ ವಿನಿಯೋಗ, ಸಂಜೆ 6ಕ್ಕೆ ದೇವಸ್ಥಾನದ ಮುಂಭಾಗ ಸಿಡಿ ಉತ್ಸವ ಜರುಗಲಿದ್ದು, ಹರಕೆ ಹೊತ್ತ ಮಹಾ ಭಕ್ತರಿಂದ ಸಿಡಿ ಸೇವೆ ನಡೆಯಲಿದೆ.

ಮೇ.26ರ ಬೆಳಗ್ಗೆ 8ಕ್ಕೆ ಅಭಿಷೇಕ, ಮಹಾಮಂಗಳಾರತಿ, ರಾತ್ರಿ 9ಕ್ಕೆ ದೇವಿಯ ಮಹಾ ಭಕ್ತರಾದ ಜೋಗಪ್ಪ ಮತ್ತು ಜೋಗಮ್ಮನವರಿಂದ ಓಕುಳಿ ಸೇವೆ ಜರುಗಲಿದೆ. ಮೇ.28ರ ಬೆಳಗ್ಗೆ 8ಕ್ಕೆ ದೇವಿಗೆ ಅಭಿಷೇಕ, ಕಂಕಣ ವಿಸರ್ಜನೆಯೊಂದಿಗೆ ಜಾತ್ರೆ ಮುಕ್ತಾಯವಾಗಲಿದೆ ಎಂದು ಶ್ರೀ ರಾಜ ಉತ್ಸವಾಂಬ ದೇವಸ್ಥಾನದ ಭಕ್ತಮಂಡಳಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶ್ರೀವೀರಭದ್ರಸ್ವಾಮಿ ರಥೋತ್ಸವ: ರಸ್ತೆ ಇಕ್ಕಲಗಳಲ್ಲೂ ಭಕ್ತ ಸಾಗರ

» ಮೊದಲ ಪುಟದಿಂದ

ಹರಿಕೆ ಹೊತ್ತ ಭಕ್ತರು ಸ್ವಾಮಿಯ ನಾಮಸ್ಮರಣೆ ಮಾಡುತ್ತಾ ಅಗ್ನಿಕುಂಡ ಹಾಯ್ದರು. ಸಂಜೆ 4.50ಕ್ಕೆ ಶ್ರೀಸ್ವಾಮಿಯ ದೊಡ್ಡ ರಥೋತ್ಸವವನ್ನು ನೆರೆದಿದ್ದ ಸಾವಿರಾರು ಭಕ್ತರು ಜಯಕಾರಗಳೊಂದಿಗೆ ರಥವನ್ನು ಎಳೆದರು. ರಥದ ಎರಡೂ ಬದಿಯಲ್ಲೂ ನಿಂತ ಭಕ್ತರು ರಥದ ಮೇಲೆ ಪದ್ಧತಿಯಂತೆ ಬಾಳೆ, ಸೂರಬೆಲ್ಲ ಮುಂತಾದವುಗಳನ್ನು ತೂರಿ ಇಷ್ಟಾರ್ಥ ಈಡೇರಿಸುವಂತೆ ಬೇಡಿದರು. ಸುಮಾರು 10 ಸಾವಿರಕ್ಕೂ ಹೆಚ್ಚು ಜನರು ಉತ್ಸಾಹದಿಂದ ಪಾಲ್ಗೊಂಡಿದ್ದರು. ರಸ್ತೆಯ ಎರಡೂ ಬದಿಯ ಮನೆಗಳ ಮೇಲೂ ಸಹ ಹತ್ತಿನಿಂತು ಭಕ್ತರು ರಥೋತ್ಸವವನ್ನು ವೀಕ್ಷಿಸಿದರು. ಹರಕೆ ಹೊತ್ತ ನೂರಾರು ಭಕ್ತರು ಶ್ರೀಸ್ವಾಮಿಗೆ ಭಾರಿ ಗಾತ್ರದ ಹೂವಿನ ಹಾರಗಳನ್ನು ಮೆರವಣಿಗೆ ಮೂಲಕ ತಂದು ರಥಕ್ಕೆ ವಿಶೇಷವಾಗಿ ಸಮರ್ಪಿಸಿದರು.ಧರ್ಮದರ್ಶಿಗೌಡ್ರರಾಜಣ್ಣ,ಗ್ರಾಮದಶಾನಭೋಗರಾದ ಪಿ.ವಿ.ಸುಬ್ಬಣ್ಣ, ಕುಮಾರಸ್ವಾಮಿ, ಪಣೀಂದ್ರಅನಂತಪ್ರಸಾದ್, ಸಿ.ಎಸ್. ಗೋಪಿನಾಥ, ದೇವಸ್ಥಾನದ ಆಯಗಾರರಾದ ಗೌಡ್ರನಾಗಣ್ಣ, ಗೌಡ್ರಚಿಕ್ಕಣ್ಣ, ಪಿ.ತಿಪ್ಪೇಸ್ವಾಮಿ, ದಳವಾಯಿಮೂರ್ತಿ, ಸೂರಯ್ಯ, ಮಂಜು, ಟೈಲರ್‌ವೀರೇಶ್, ದೇವಿಪ್ರಸಾದ್, ನಾಗರಾಜು, ಪೂಜಾರಾದ ಶಾಂತಕುಮಾರ್, ಸುರೇಶ್‌ಕುಮಾರ್, ಕುಮಾರಸ್ವಾಮಿ, ಕಾಂಗ್ರೆಸ್ ಹಿರಿಯ ಮುಖಂಡ ಟಿ.ಪ್ರಭುದೇವ್, ಶಂಕರ, ಹೊಸಮನೆಸ್ವಾಮಿ, ನಗರಸಭೆಯ ಸದಸ್ಯರು ಪಾಲ್ಗೊಂಡಿದ್ದರು. ಮುಕ್ತಿ ಬಾವುಟ ಹರಾಜ ಕಾರ್ಯದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಚಿತ್ರದುರ್ಗ ಕ್ಷೇತ್ರದ ಶಾಸಕ ಕೆ.ಸಿ.ವೀರೇಂದ್ರ(ಪಪ್ಪಿ), ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ನಿಮಗದ ಅಧ್ಯಕ್ಷ ಟಿ.ರಘುಮೂರ್ತಿ ಸೇರಿದಂತೆ ಹಲವಾರು ಗಣ್ಯರು ಹರಾಜಿನ ಸಮಯದಲ್ಲಿ ಉಪಸ್ಥಿತರಿದ್ದು, ಸಚಿವ ಡಿ.ಸುಧಾಕರ 27 ಲಕ್ಷಕ್ಕೆ ಕೂಗಿದರೆ, ಶಾಸಕ ಕೆ.ಸಿ.ವೀರೇಂದ್ರ(ಪಪ್ಪಿ) 30 ಲಕ್ಷಕ್ಕೆ ಅಂತಿಮವಾಗಿ ಮುಕ್ತಿಬಾವುಟವನ್ನು ಹರಾಜಿನಲ್ಲಿ ಪಡೆದರು.

ಬುಡಕಟ್ಟು ಸಮುದಾಯದಆರಾಧ್ಯ ದೈವಿ ಸಿಂತಾಲಪಾಪಮ್ಮಗೆ ವಿಶೇಷ ಪೂಜೆ

» ಚಳ್ಳಕೆರೆ

ಜಿಲ್ಲೆಯ ಬುಡಕಟ್ಟು ಸಮುದಾಯಗಳ ಹಲವಾರು ಆಚರಣೆಗಳು ಇಂದಿಗೂ ಜೀವಂತಿಕೆಯಾಗಿ ಹಬ್ಬಹರಿದಿನ ಜಾತ್ರೆ ಸಂದರ್ಭದಲ್ಲಿ ಅನಾವರಣಗೊಳ್ಳುತ್ತವೆ. ಚಳ್ಳಕೆರೆ ತಾಲ್ಲೂಕು ಹಲವಾರು ರಾಜಮನೆತನಗಳ ಆಳ್ವಿಕೆ ಸಂದರ್ಭದಲ್ಲಿ ಬಿಟ್



ಸಮಾನತೆಯ ಸಮಾಜ ನಿರ್ಮಾಣ: ಅಂಬೇಡ್ಕರ್ ಮತ್ತು ಬಸವಣ್ಣನ ಕೊಡುಗೆ ಗಳಲ್ಲಿನ ಸಾಮ್ಯತೆಗಳು

12ನೇ ಶತಮಾನದಲ್ಲಿ ಬಸವಣ್ಣ ಮತ್ತು 19ನೇ ಶತಮಾನದಲ್ಲಿ ಬಾಬಾ ಸಾಹೇಬ್ ಡಾ.ಅಂಬೇಡ್ಕರ್ ಅವರು ದೀನದಲಿತರ ವಿಮೋಚಕರಾಗಿ ಮತ್ತುಅಜ್ಞಾನ ಮತ್ತು ಮೂಢನಂಬಿಕೆಗಳಲ್ಲಿ ಮುಳುಗಿರುವ ಪಳೆಯುಳಿಕೆಗೊಂಡ ಸಮಾಜದ ಸುಧಾರಕರಾಗಿ ಕಾಣಿಸಿಕೊಂಡರು. ಮಧ್ಯಕಾಲೀನ ಭಾರತದಕ್ರಾಂತಿಕಾರಿ ಬಸವಣ್ಣರವರು ಸಾಮಾಜಿಕ ಶ್ರೇಣಿಯಲ್ಲಿಉನ್ನತ ಸ್ಥಾನವನ್ನು ಪಡೆದಕುಟುಂಬದಲ್ಲಿ ಜನಿಸಿದರು. ನಂತರ ಬಸವಣ್ಣ ಆ ಕಾಲದ ಪ್ರಭಲ ಕಲಚೂರಿದೊರೆ 2ನೇ ಬಿಜ್ಜಳನ ಆಸ್ಥಾನದಲ್ಲಿಜಜಾಂಚಿ ಮತ್ತು ಪ್ರಧಾನಮಂತ್ರಿ ಹುದ್ದೆಯನ್ನು ಅಲಂಕರಿಸಿದರು.ಮತ್ತೊಂದೆಡೆಬಾಬಾ ಸಾಹೇಬ್ಅಂಬೇಡ್ಕರ್‌ರವರು ಸಂಪೂರ್ಣಕಠಿಣ ಪರಿಶ್ರಮದಿಂದ ಶೈಕ್ಷಣಿಕಉತ್ಕೃಷ್ಟತೆಯನ್ನು ಗಳಿಸಿದರು. ಆದರೆಅವರ ಸಾಮಾಜಿಕ ಹಿನ್ನೆಲೆಯಿಂದಾಗಿಅವರ ವೃತ್ತಿಜೀವನದಲ್ಲಿಅಡಚಣೆ ಮತ್ತು ಅವಮಾನಗಳನ್ನು ಎದುರಿಸಬೇಕಾಯಿತು.ವಿಭಿನ್ನ ಯುಗಗಳು ಮತ್ತು ಸಾಮಾಜಿಕ ಹಿನ್ನೆಲೆಗೆ ಸೇರಿದವರಾಗಿದ್ದರೂ, ಬಸವಣ್ಣ ಮತ್ತುಅಂಬೇಡ್ಕರ್ ನಡುವೆ ಸಾಮಾನ್ಯವಾದಒಂದು ವಿಷಯವೆಂದರೆದಮನಿತ ಮತ್ತುದ್ವನಿರಹಿತ ಸಮುದಾಯಗಳ ಸುಧಾರಣೆ ಮತ್ತುತಾರತಮ್ಯ ಮುಕ್ತ ಸಮಾನತೆಯ ಸಮಾಜವನ್ನು ಸ್ಥಾಪಿಸುವ ಅವರಹೋರಾಟಮತ್ತು ಬದ್ಧತೆ.

ಇಬ್ಬರೂ ಹಿಂದೂಜಾತಿ ವ್ಯವಸ್ಥೆಯನ್ನು ವಿರೋಧಿಸಿದರು:ಬಸವಣ್ಣನವರ ಪ್ರಕಾರ ಮನುಷ್ಯನ ಮೌಲ್ಯವನ್ನು ಅವನ ಹುಟ್ಟಿನಿಂದಅಲ್ಲ, ಅವನ ಆಲೋಚನೆ ಮತ್ತುಕಾರ್ಯಗಳಿಂದ, ಅವನ ನಡವಳಿಕೆ ಮತ್ತುಚಾರಿತ್ರ್ಯದಿಂದ ನಿರ್ಣಯಿಸಬೇಕು. ಅವರುಜಾತಿಯಿಂದಕೂಡಿದ ಸಮಾಜವನ್ನು ಖಂಡಿಸಿದರುಮತ್ತುಹಿಂದೂಸಮಾಜದಚತುರ್‌ವರ್ಣ ವಿಭಜನೆಯ ವಿರುದ್ಧತಮ್ಮ ಪ್ರತಿಭಟನೆಯಧ್ವನಿಯನ್ನು ಎತ್ತಿದರು.ಬಸವಣ್ಣನವರು ವೇದಗಳಲ್ಲಿ ಸೂಚಿಸಿರುವ ಆಚರಣೆಗಳನ್ನು ಮತ್ತುಅದಕ್ಕೆಕಾರಣವಾದ ಪುರೋಹಿತರಕುಶಲತೆಯ ವಿರುದ್ಧತೀವ್ರವಾಗಿ ಪ್ರತಿಭಟಿಸಿದರು.ವರ್ಣಾಶ್ರಮಧರ್ಮವನ್ನು ಧಿಕ್ಕರಿಸಿ ಬ್ರಾಹ್ಮಣನಾದ ಮಧುವರಸನ ಮಗಳನ್ನು ದಲಿತನಾದ ಹರಳಯ್ಯನ ಮಗನೊಡನೆ ವಿವಾಹವನ್ನು ಬೆಂಬಲಿಸಿದರು.

ಅದೇರೀತಿ1936ರಲ್ಲಿ ಲಾಹೋರ್‌ನಜಟ್–ಪಟ್–ತೋಟಕ್‌ಮಂಡಲ್‌ನ ವಾರ್ಷಿಕ ಸಮ್ಮೇಳನದಲ್ಲಿ ಸಿದ್ಧಗೊಳಿಸಿದ ಭಾಷಣದಲ್ಲಿ ಬಾಬಾ ಸಾಹೇಬ್‌ಅಂಬೇಡ್ಕರ್‌ರವರು ವೇದಗಳು ಮತ್ತು ಸ್ಮೃತಿಗಳಲ್ಲಿ ಅಡಕವಾಗಿರುವ ಹಿಂದೂಧರ್ಮವುತ್ಯಾಗ, ಸಾಮಾಜಿಕ ಸಮೂಹವೇ ಹೊರತು ಬೇರೆನೂಅಲ್ಲ. ಹಿಂದೂಗಳು ಯಾವುದನ್ನುಧರ್ಮಎಂದುಕರೆಯುತ್ತಾರೆಯೋಅದು ಬಹುಸಂಖ್ಯೆಯ ಆಜ್ಞೆಗಳು ಮತ್ತು ನಿಷೇಧಗಳಲ್ಲದೇ ಬೇರೇನೂಅಲ್ಲ. ಹಿಂದೂಧರ್ಮವು ನಿಜವಾದಧರ್ಮವಾಗಬೇಕಾದರೆ, ಆಧ್ಯಾತ್ಮಿಕ ತತ್ವಗಳ ಅರ್ಥದಲ್ಲಿ, ನಿಜವಾದ ಸಾರ್ವತ್ರಿಕ,ಎಲ್ಲಾ ಜನಾಂಗಗಳಿಗೆ, ಎಲ್ಲಾ ದೇಶಗಳಿಗೆ, ಎಲ್ಲಾ ಕಾಲಕ್ಕೂ ಅನ್ವಯಿಸುವ ಹಾಗಿರಬೇಕು. ಅದು ಹೊಸ ಸೈದ್ಧಾಂತಿಕಆಧಾರವನ್ನು ಹೊಂದಿರಬೇಕು.ಇದು ಸ್ವಾತಂತ್ರ್ಯಕ್ಕೆಅನುಗುಣವಾಗಿರುವ ಸಮಾನತೆ, ಭ್ರಾತೃತ್ವ ಮತ್ತು ಸಂಕ್ಷಿಪ್ತವಾದ ಪ್ರಜಾಪ್ರಭುತ್ವದೊಂದಿಗೆಆಧಾರವಾಗಿಬೇಕು.

ಸಾಂಸ್ಥಿಕ ನಿರ್ಮಾಪಕರು ಮತ್ತು ಆಳವಾದ ಬರಹಗಾರರು:ಬಸವಣ್ಣ ಮತ್ತುಅಂಬೇಡ್ಕರ್ ನಡುವಿನ ಸಾಮ್ಯತೆಗಳುಅವರಪ್ರಗತಿಪರಸಾಮಾಜಿಕ–ಧಾರ್ಮಿಕ ದೃಷ್ಟಿಕೋನಗಳೊಂದಿಗೆಕೊನೆಗೊಳ್ಳುವುದಿಲ್ಲ.ಇಬ್ಬರೂ ಸಾಂಸ್ಥಿಕ ನಿರ್ಮಾಪಕರು: ಬಸವಣ್ಣರವರುಅನುಭವ ಮಂಟಪವನ್ನು ಸ್ಥಾಪಿಸಿದರು. ಅಲ್ಲಿಜಾತಿ, ವರ್ಗ ಮತ್ತು ಲಿಂಗವನ್ನು ಲೆಕ್ಕಿಸದೆಎಲ್ಲಾಸದಸ್ಯರು ವಿವಿಧಸಾಮಾಜಿಕ ಸಮಸ್ಯೆಗಳು ಮತ್ತುವಿಷಯಗಳ ಬಗ್ಗೆ ಮುಕ್ತವಾಗಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಿದ್ದರು.ಅದೇರೀತಿಬಹಿಷ್ಕೃತ ಹಿತಕಾರಿಣಿ ಸಭಾ, ಸ್ವತಂತ್ರ್ಯಕಾರ್ಮಿಕ ಪಕ್ಷ ಮತ್ತುಜನರ ಶೈಕ್ಷಣಿಕ ಸಂಸ್ಥೆಗಳಂತಹ ವಿವಿಧಪಕ್ಷ ಮತ್ತುಸಂಸ್ಥೆಗಳನ್ನು ಸ್ಥಾಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಅದಕ್ಕಿಂತ ಹೆಚ್ಚಾಗಿ ಅಂಬೇಡ್ಕರ್‌ರವರು ಭಾರತದ ಸಂವಿಧಾನಶಿಲ್ಪಿಯಾಗಿದ್ದು, ಇದರಲ್ಲಿಅವರುಎಲ್ಲಾಜನರ ಪ್ರತ್ಯೇಕತೆ ಮತ್ತು ಶ್ರೇಣಿಗಳನ್ನು ಲೆಕ್ಕಿಸದೆಅವರ ಹಕ್ಕುಗಳಿಗೆ ಅವಕಾಶ ಕಲ್ಪಿಸಿದರು ಮತ್ತು ರಕ್ಷಿಸಿದರು.

ಶ್ರೇಷ್ಠ ಬರಹಗಳು:ಬಸವಣ್ಣ ಮತ್ತುಅಂಬೇಡ್ಕರ್ಇಬ್ಬರೂಅದ್ವಿತೀಯ ಲೇಖಕರು. ಬಸವಣ್ಣನವರುಅಸಂಖ್ಯಾತ ವಚನಗಳನ್ನು ರಚಿಸಿದ್ದು, ಅದರಲ್ಲಿ ಸುಮಾರು 1400 ವಚನಗಳು ಪತ್ತೆಯಾಗಿವೆ. ವಚನಗಳು ಒಂದುರೀತಿಯಕಾವ್ಯಾತ್ಮಕಗದ್ಯವಾಗಿದ್ದು, ಬಸವಣ್ಣನವರುತಮ್ಮಆಧ್ಯಾತ್ಮಿಕ ವಿಚಾರಗಳನ್ನು ಮತ್ತು ಅನುಭವಗಳನ್ನು ವ್ಯಕ್ತಪಡಿಸಿದ್ದಾರೆ. ಅಂಬೇಡ್ಕರ್‌ರವರುಜಾತಿ, ಧರ್ಮ, ರಾಜಕೀಯ, ಕಾನೂನು, ಆಡಳಿತ, ಅರ್ಥಶಾಸ್ತ್ರ ಮುಂತಾದ ವೈವಿಧ್ಯಮಯ ವಿಷಯಗಳ ಕುರಿತು ವ್ಯಾಪಕವಾಗಿ ಬರೆದಿದ್ದಾರೆ.ಇವೆಲ್ಲವೂ'ಅಂಬೇಡ್ಕರ್‌ಅವರ ಸಂಗ್ರಹಿತ ಕೃತಿಗಳು' ಎಂಬ ಶೀರ್ಷಿಕೆಯಡಿಯಲ್ಲಿ ಹಲವಾರು ಸಂಪುಟಗಳಲ್ಲಿ ಪ್ರಕಟವಾಗಿವೆ.

ಸ್ಥಾನ ಮತ್ತುಅಧಿಕಾರದತ್ಯಾಗ: ಬಸವಣ್ಣಅಧಿಕಾರದ ಸ್ಥಾನದಲ್ಲಿದ್ದರೂ, ಸಾಮಾಜಿಕವಾಗಿ ಪ್ರತಿಷ್ಠೆ ಹೊಂದಿದ್ದರೂತಾವು ಹೊಂದಿರುವ ಆದರ್ಶಗಳಿಗಾಗಿ ಎಲ್ಲವನ್ನೂ ತ್ಯಜಿಸಿದರು. ಅದೇರೀತಿಅಂಬೇಡ್ಕರ್‌ರವರುತಮ್ಮಉನ್ನತ ಶೈಕ್ಷಣಿಕಅರ್ಹತೆ ಮತ್ತು ಬುದ್ಧಿವಂತಿಕೆಯೊಂದಿಗೆ ಸರ್ಕಾರದ ಪ್ರಬಲ ಹುದ್ದೆಗಳು ಮತ್ತು ಸ್ಥಾನಗಳನ್ನು ಆಕ್ರಮಿಸಿಕೊಳ್ಳಬಹುದಿತ್ತು, ಆದರೆಅವರುತಮ್ಮಜೀವಿತಾವಧಿಯನ್ನುದಲಿತರನ್ನು ಜಾಗೃತಗೊಳಿಸುವಲ್ಲಿ, ಅವರ ಹಕ್ಕುಗಳ ಬಗ್ಗೆ ಶಿಕ್ಷಣ ನೀಡುವಲ್ಲಿ, ಅವರನ್ನುಒಗ್ಗೂಡಿಸುವಲ್ಲಿ ಮತ್ತುಅವರನ್ನು ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಮತ್ತುಆರ್ಥಿಕವಾಗಿಉನ್ನತೀಕರಿಸುವಿಕೆಯಲ್ಲಿ ಕಳೆದರು. ಜಾತಿ ಮತ್ತುಅಸ್ಪೃಶ್ಯತೆ ನಿರ್ಮೂಲನೆಗೆ ಶ್ರಮಿಸಿದ ವ್ಯಕ್ತಿಗಳು ಎಂದುಗಾಡ್ಗೆ ಬಾಬಾ ಮತ್ತುಕಬೀರರ ಹೆಸರನ್ನು ಉಲ್ಲೇಖಿಸಿದಅಂಬೇಡ್ಕರ್‌ರವರು ಬಸವಣ್ಣನವರ ಬಗ್ಗೆ ಯಾವುದೇಉಲ್ಲೇಖವನ್ನು ಮಾಡಿಲ್ಲ. ಬಹುಶಃ ಅವರಿಗೆ ಬಸವಣ್ಣನವರ ಬೋಧನೆ ಮತ್ತುಅವರಧರ್ಮದಬಗ್ಗೆ ತಿಳಿದಿರಲಿಲ್ಲ. ಬಸವಣ್ಣನವರ ಕೃತಿಗಳನ್ನು ಇತರೆ ಭಾಷೆಗಳಿಗೆ ಅದರಲ್ಲೂಇಂಗ್ಲೀಷ್‌ಗೆ ಅನುವಾದಿಸದಿರುವುದುಇದಕ್ಕೆಕಾರಣವಾಗಿರಬಹುದು. ಬಸವಣ್ಣನವರುಕೂಡತಮ್ಮ ವಚನಗಳಲ್ಲಿ ಬುದ್ಧನ ಬಗ್ಗೆ ಏನನ್ನೂ ಉಲ್ಲೇಖಿಸಿಲ್ಲ.

ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ ಸಮಾನತೆಯ ಲಿಂಗಾಯತಧರ್ಮ ಮತ್ತು ವಚನಗಳು ಬಸವಣ್ಣನವರು ಬಿಟ್ಟು ಹೋದ ಪರಂಪರೆಯಾಗಿದೆ.ಭಾರತೀಯ ಸಮಾಜದಲ್ಲಿಐತಿಹಾಸಿಕವಾಗಿ ವಂಚಿತ ವರ್ಗಕ್ಕೆಭಾರತೀಯ ಸಂವಿಧಾನವುಜಾತಿ, ವರ್ಗ ಮತ್ತು ಲಿಂಗ ಭೇದವಿಲ್ಲದೆಎಲ್ಲಾ ನಾರೀಕರಿಗೆ ಸಮಾನತೆ ಮತ್ತು ಶಾಸನಸಭೆಗಳಲ್ಲಿ ಮೀಸಲಾತಿ, ಸರ್ಕಾರಿ ವಲಯದಲ್ಲಿಶಿಕ್ಷಣ ಮತ್ತುಉದ್ಯೋಗದ ಭರವಸೆಯುಅಂಬೇಡ್ಕರ್ ಬಿಟ್ಟುಹೋದ ಪರಂಪರೆಯಾಗಿದೆ.

ಸಾಮಾಜಿಕ ನ್ಯಾಯ ಮತ್ತು ಮಹಿಳಾ ಸಬಲೀಕರಣ:ಸಾಮಾಜಿಕ ನ್ಯಾಯ ಮತ್ತು ಮಹಿಳಾ ಸಬಲೀಕರಣವನ್ನುಖಾತ್ರಿಪಡಿಸುವಲ್ಲಿ ಬಸವಣ್ಣನವರು ನಿರ್ಣಾಯಕ ಪಾತ್ರ ವಹಿಸಿದ್ದಾರೆ. ಅವರು 12ನೇ ಶತಮಾನದಲ್ಲಿಯೇ ಸಾಮಾಜಿಕ ಸಮಾನತೆಯ ಪರಿಕಲ್ಪನೆಯನ್ನುಜಗತ್ತಿಗೆ ಬೋಧಿಸಿದರು.ಸಮಾಜದಕಟ್ಟಕಡೆಯ ವ್ಯಕ್ತಿಯನ್ನು ಮುಖ್ಯವಾಹಿನಿಗೆ ತರಬೇಕೆಂದರು.ಅಂಬೇಡ್ಕರ್‌ರವರು ಸಾಂವಿಧಾನಿಕಪ್ರಾವಧಾನಗಳ ಮೂಲಕ ಎಲ್ಲಾ ನಾಗರೀಕರ ಮತ್ತುಮಹಿಳೆಯರ ಸ್ಥಾನಮಾನವನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದ್ದಾರೆ. ಮತ್ತು ಹಿಂದೂಕೋಡ್ ಮಸೂದೆಯನ್ನು ಪ್ರಸ್ತಾಪಿಸಿಜಾರಿಗೆತರಲು ಹೋರಾಡಿದರು. ಇವರೀರ್ವರು ಸಮಾನತೆಯ ತತ್ವಗಳ ಮೇಲೆ ನಿರ್ಮಿಸಲಾದಜಾತಿರಹಿತ ಸಮಾಜವನ್ನುರಚಿಸುವ ಸಾಮಾನ್ಯಉದ್ದೇಶವನ್ನು ಹೊಂದಿದ್ದರು. ಅಂಬೇಡ್ಕರ್‌ರವರ ಶಾಂತಿ ಮತ್ತು ಸಮಾನತೆಯ ಸಂದೇಶಕ್ಕಾಗಿ ಬುದ್ಧನಿಂದತೀವ್ರ ಪ್ರಭಾವ ಹೊಂದಿದ್ದರು.

ಜನಸಾಮಾನ್ಯರಿಗೆಶಿಕ್ಷಣ:ಜನಸಾಮಾನ್ಯರಲ್ಲಿಜಾಗೃತಿ ಮೂಡಿಸಲುಇವರೀರ್ವರು ಪ್ರಾಮುಖ್ಯತೆ ನೀಡಿದರು. ಅಂಬೇಡ್ಕರ್‌ಅವರು ಸಂವಿಧಾನದ ಮೂಲಕ ಶಿಕ್ಷಣವನ್ನು ಮೂಲಭೂತ ಹಕ್ಕಾಗಿ ಮಾಡಿದರು. ಮತ್ತು ಬಸವಣ್ಣನವರು ವಚನಗಳ ಮೂಲಕ ಜಾಗೃತಿ ಮೂಡಿಸಿದರು.

ಶ್ರೇಷ್ಠ ಶಿಕ್ಷಕರು:ಇಬ್ಬರೂತಮ್ಮ ಬೋಧನೆಗಳ ಮೂಲಕ ವಿಶೇಷವಾಗಿ ಸಮಾಜದ ದೀನದಲಿತ ವರ್ಗಗಳನ್ನುಕ್ರಾಂತಿಯನ್ನುಂಟುಮಾಡಿದರು.ಅವರುಜಾತಿ ವ್ಯವಸ್ಥೆಯ ವಿಮೋಚನೆಗಾಗಿ ಚಳುವಳಿಯನ್ನು ಪ್ರಾರಂಭಿಸಿದರು.ಅಂತರ್ಜಾತಿ ವಿವಾಹವನ್ನು ಪ್ರೋತ್ಸಾಹಿಸಿದರು.ಮಹಿಳೆಯರಿಗೆ ಸಮಾನ ಹಕ್ಕುಗಳು ಮತ್ತು ಅವಕಾಶಗಳಿಗಾಗಿ ಹೋರಾಡಿದರು.

ಕೆಲಸದತತ್ವ:ಬಸವಣ್ಣನವರುಕಾಯಕವೇ ಕೈಲಾಸ ಎಂಬ ತತ್ವದಲ್ಲಿ ನಂಬಿಕೆಯಿಟ್ಟುಜೀವನೋಪಾಯಕ್ಕೆ ಪ್ರೇರಣೆ ನೀಡಿದರು. ಅಂಬೇಡ್ಕರ್‌ರವರುಅರ್ಥಶಾಸ್ತ್ರಜ್ಞರಾಗಿದ್ದರು ಮತ್ತುದಲಿತರು, ಹಿಂದುಳಿದ ವರ್ಗ ಮತ್ತು ಸಮಾಜದಇತರಆರ್ಥಿಕವಾಗಿದುರ್ಬಲ ವರ್ಗಗಳ ಜೀವನ ಮಟ್ಟವನ್ನು ಸುಧಾರಿಸಲುಕೇಂದ್ರದಆರ್ಥಿಕ ನೀತಿಗಳನ್ನು ರೂಪಿಸಿದರು.

ಬಸವಣ್ಣ ಮತ್ತುಅಂಬೇಡ್ಕರ್‌ಇಬ್ಬರಲ್ಲಿಯೂ ಬುದ್ಧನ ತತ್ವಗಳನ್ನು ಕಾಣಬಹುದು.ಸಹಾನುಭೂತಿ, ಅವರೀರ್ವರುಸಮಾನತೆ ಮತ್ತು ಭ್ರಾತೃತ್ವವು ಸಮಾನತೆಯ ಸಮಾಜದ ಸೃಷ್ಟಿಗೆ ಕಾರಣವಾಗುತ್ತದೆಎನ್ನುವ ಮುನ್ನೋಟವನ್ನು ಹೊಂದಿದ್ದರು ಮತ್ತುಅವರಜೀವನುದ್ದಕ್ಕೂಅದನ್ನೇ ಬೋಧಿಸಿ ಸಮಸಮಾಜ ನಿರ್ಮಾಣ ಮಾಡುವಲ್ಲಿ ಹಗಲಿರುಳು ಶ್ರಮಿಸಿದರು.

ಡಾ. ಜಡನ್ನಾಥ ಕೆ.
ಡಾಂಗೆ, ಶಿಕ್ಷಣ
ಪ್ರಾಧ್ಯಾಪಕರು ಕುವೆಂಪು
ವಿಶ್ವವಿದ್ಯಾಲಯ.

ಉಷಾ.ಆರ್.ಜಿ
ಸಹಾಯಕ ಪ್ರಾಧ್ಯಾಪಕರು
ಓಂಕಾರ್ಮಲ್ ಶಿಕ್ಷಣ
ಮಹಾವಿದ್ಯಾಲಯ
ಮೈಸೂರು

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T